MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

## ಮೊಮ್ಮಗನ ಸಾವಿನಿಂದ ಮನನೊಂದಿದ್ದ ಮನೋಜ್ ಅಜ್ಜಿ ನಿಧನ

ತುಮಕೂರು, ಜೂ.9– ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಿಂದ ಮೃತಪಟ್ಟ ಜಿಲ್ಲೆಯ ಯಡಿಯೂರು ಹೋಬಳಿಯ ನಾಗಸಂದ್ರ ನಿವಾಸಿ ಮನೋಜ್ ಅವರ ಅಜ್ಜಿ ಮೊಮ್ಮಗನ ಸಾವಿನಿಂದ ನೊಂದು ನಿಧನರಾಗಿದ್ದಾರೆ. ದೇವಿರಮ (70) ಮೃತಪಟ್ಟ ವೃದ್ಧೆ.

ಸಂಪುಟ: 04 | ಸಂಚಿಕೆ: 215 | ಮಂಗಳವಾರ : 10–06–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 215 | TUESDAY : 10–06–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಖಾತೆ ಬದಲಾವಣೆ ಸುಳ್ಳು, ಸವಾಲು ಎದುರಿಸುವೆ



**ಬೆಂಗಳೂರು, ಜೂ. 9–** ಗೃಹ ಖಾತೆಯಿಂದ ತಮ್ಮನ್ನು ಬದಲಿಸುವಂತೆ ಮುಖ್ಯಮಂತ್ರಿಗಳಿಗೆ ನಾನು ಕೇಳಿದ್ದೇನೆ ಎಂಬುದು ಸತ್ಯಕ್ಕೆ ದೂರವಾದದ್ದು. ಈ ರೀತಿ ನಾನು ಕೇಳಿಲ್ಲ. ಇದು ಸುಳ್ಳು ಸುದ್ದಿ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.

ಬೆಂಗಳೂರಿನಲ್ಲಿ ಸೋಮವಾರ ಕೇಂದ್ರ ಸಚಿವ ವಿ. ಸೋಮಣ್ಣನವರನ್ನು ಅವರ ನಿವಾಸದಲ್ಲಿ ಭೇಟಿ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರು ಈ ರೀತಿ ಸುದ್ದಿ ಕೊಟ್ಟರೋ ಗೊತ್ತಿಲ್ಲ. ಮಾಧ್ಯಮಗಳು ಈ ಸುದ್ದಿಯನ್ನು ಪ್ರಕಟಿಸುವ ಮುನ್ನ ನನ್ನನ್ನು ಕೇಳಬಹುದಿತ್ತು. ಈ ಸುದ್ದಿಗಳನ್ನು ಹಾಕುವ ಮೂಲಕ ನನ್ನ ವ್ಯಕ್ತಿತ್ವವನ್ನು ಕೊಲೆ ಮಾಡಲಾಗಿದೆ. ನಾನು ಗೃಹ ಖಾತೆಯನ್ನು ಬದಲಿಸುವಂತೆ ಮುಖ್ಯಮಂತ್ರಿಗಳನ್ನು ಕೇಳಿಲ್ಲ, ಇದು ಸುಳ್ಳು ಎಂದರು.

ಬೆಂಗಳೂರಿನಲ್ಲಿ ಕಾಲ್ತುಳಿತ ದುರಂತ ನಡೆದಿದೆ ನಿಜ. ಇದು ನಡೆಯಬಾರದಿತ್ತು. ನಮಗೂ ನೋವಾಗಿದೆ. ಹಾಗೆಂದು ಹೇಡಿತನದಿಂದ ಪಲಾಯನ ಮಾಡುವ ಪ್ರಶ್ನೆಯೇ ಇಲ್ಲ. ಸವಾಲಿನಿಂದ ಎಲ್ಲವನ್ನು ಎದುರಿಸುವ ಸಮಯ ಇದು ಎಂದು ಅವರು ಹೇಳಿದರು.

ಮಾಧ್ಯಮ ಮಿತ್ರರ ಜತೆ ನಾನು ಮೊದಲಿನಿಂದಲೂ ಸಂಯಮದಿಂದ ನಡೆದುಕೊಂಡಿದ್ದೇನೆ. ಮಾಧ್ಯಮ ಮಿತ್ರರು ಏಕೆ ಈ ರೀತಿ ಸುದ್ದಿಗಳನ್ನು ಪ್ರಸಾರ ಮಾಡುತ್ತಾರೋ ಗೊತ್ತಿಲ್ಲ. ಪ್ರಸಾರ ಮಾಡುವ ಮೊದಲು ಗೃಹ ಖಾತೆ ಬದಲಿಸುವಂತೆ ಕೇಳಿದ್ದೀರಾ ಎಂದು ನನ್ನನ್ನು ಒಂದು ಮಾತು ಕೇಳಿದ್ದರೆ ನಾನು ಸ್ಪಷ್ಟನೆ ಕೊಡುತ್ತಿದ್ದೆ. ಅದು ಬಿಟ್ಟು

2ನೇಪುಟಕ್ಕೆ

## ಮೋದಿ ಸರ್ಕಾರದ ಸಾಧನೆ ಶೂನ್ಯ



**ಬೆಂಗಳೂರು, ಜೂ. 9–** ಕೇಂದ್ರದ ಪ್ರಧಾನಿ ಮೋದಿ ನೇತೃತ್ವದ ಸರ್ಕಾರಕ್ಕೆ ಸೊನ್ನೆ ಅಂಕ ಕೊಡುವುದಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಇಂದು 11 ವರ್ಷ ಅಧಿಕಾರಾವಧಿ ಪೂರೈಸಿರುವ ಬಗ್ಗೆ ಮೈಸೂರಿನಲ್ಲಿಂದು ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಮೋದಿ ಅವರು ಬದುಕಿರುವುದೇ ಪ್ರಚಾರದಿಂದ ಅವರು ಜನತೆಗೆ ನೀಡಿದ ಪ್ರಮುಖ ಭರವಸೆಗಳಲ್ಲಿ ಯಾವುದನ್ನೂ ಈಡೇರಿಸಿಲ್ಲ. ಹಾಗಾಗಿ ಮೋದಿ ಸರ್ಕಾರಕ್ಕೆ ಸೊನ್ನೆ ಅಂಕ ಕೊಡುತ್ತೇನೆ ಎಂದರು.

ಪ್ರಧಾನಿ ಮೋದಿ ಅವರ ಆಡಳಿತದಲ್ಲಿ ಸುಳ್ಳು ವಿಚಾರಗಳಿಗೆ ಹೆಚ್ಚಿನ ಪ್ರಚಾರವನ್ನು ಮಾಧ್ಯಮಗಳು ನೀಡುತ್ತಿವೆ ಎಂದು ಅವರು ಟೀಕಿಸಿದರು.

## ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳಿಗೆ ಸೇನಾ ಅಧಿಕಾರಿಗಳ ಭೇಟಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.9–**ಭಾರತೀಯ ಸೇನೆಯ ಅಧಿಕಾರಿಗಳಾದ ಮೇಜರ್ ಬಸವ ಪ್ರಭು ಹಾಗೂ ಸಂಜೀವ್ ಸಾಧುನವರ್ ಅವರ ನೇತೃತ್ವದ ತಂಡವು, ರಾಯಚೂರ ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳಿಗೆ ಇತ್ತೀಚಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಂಭವವಿದೆ ಎಂದು ಹಮಾಮಾನ ಇಲಾಖೆ ವರದಿ ನೀಡಿರುವ ಹಿನ್ನಲೆಯಲ್ಲಿ ಮುಂಜಾಗೃತಾ ಕ್ರಮವಾಗಿ ತಂಡವು ಈ ಕಾರ್ಯಕ್ರಮ ನಡೆಸಿತು.

ರಾಯಚೂರಿನ ತಾಲೂಕಿನ ಆತ್ಕೂರು, ಕುರ್ವಕರ್ದಾ, ಕುರ್ವಕಲಾ, ದೊಂಗರಾಂಪುರ, ಕಾಡೂರು ಹಾಗೂ ಗುರ್ಜಾಪೂರ, ಗುರ್ಜಾಪೂರ ಬ್ರಿಡ್ಜ್ ಕಮ್ ಬ್ಯಾರೇಜ ಹಾಗೂ ದೇವದುರ್ಗ ತಾಲೂಕಿನ ಅಪ್ರಾಳ, ಬಸವಂತಪುರ, ಹಿರೇರಾಯಕುಂಪಿ, ಚಿಕ್ಕರಾಯಕುಂಪಿ, ಗೂಗಲ್, ಗೂಗಲ್ ಬ್ರಿಡ್ಜ್ ಕಮ್ ಬ್ಯಾರೇಜ್ ಸೇರಿದಂತೆ ಶಕ್ತಿನಗರದ ಹೆಲಿಪ್ಯಾಡ್ ಈ ಎಲ್ಲಾ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ರಾಯಚೂರಿನ ಅಗ್ನಿಶಾಮಕ ದಳದ ಕಚೇರಿಗೆ ಭೇಟಿ ನೀಡಿ ಪ್ರವಾಹದ ಸಂದರ್ಭದಲ್ಲಿ ಉಪಯೋಗಿಸುವ ರಕ್ಷಣಾ ಸಾಮಗ್ರಿಗಳ ಬಗ್ಗೆ ಪರಿಶೀಲನೆ ನಡೆಸಿ, ಒಂದು ವೇಳೆ ಪ್ರವಾಹದ ಬಂದಲ್ಲಿ ಸಕಲ ರೀತಿಯಲ್ಲಿ ಸಜ್ಜಾಗಿರಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೇನಾ ಅಧಿಕಾರಿ ಅಭಯ ಕುಮಾರ್ ಹಾಗೂ ಸಂಜೀವ್ ಸಾಧುನವರ್ ಅವರು ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಹಾಗೂ ದೇವದುರ್ಗ ತಾಲೂಕಿನ ತಹಶೀಲ್ದಾರರು, ಜಿಲ್ಲಾ ಅಗ್ನಿ ಶಾಮಕ ದಳದ ಅಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ವಿಪತ್ತು ಪರಿಣಿತರು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು ಸೇರಿದಂತೆ ಇತರೆ ಇದ್ದರು.

# ನಾಳೆ ಉದ್ಯೋಗ ಮೇಳ: ವಿದ್ಯಾರ್ಥಿಗಳಿಗೆ ಸುವರ್ಣ ಅವಕಾಶ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜೂ.9–**ಪಟ್ಟಣದ ಖೇಣೇದ್ ಮುರಿಗೆಪ್ಪ ಮಹಾವಿದ್ಯಾಲಯ ಆವರಣದಲ್ಲಿ ಬುಧವಾರ ಜೂ.11ರಂದು ಬೆಳಿಗ್ಗೆ 9ರಿಂದ ಸಂಜೆ 5ಗಂಟೆವರೆಗೆ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಕಾಲೇಜ್ ಪ್ರಾಚಾರ್ಯ ವೀರೇಶ ಪೂಜಾರಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಐಟಬಿಟಿ, ಬ್ಯಾಂಕ್ ಸೇರಿದಂತೆ 22ಅಧಿಕ ಕಂಪನಿಗಳು ಪಾಲ್ಗೊಳ್ಳುತ್ತಿವೆ. ಆನ್‌ಲೈನ್ ಮೂಲಕ ನೋಂದಣಿ ಆಗಿದ್ದಂತ 200 ಅಧಿಕ ವಿದ್ಯಾರ್ಥಿಗಳು ಕ್ಲಾಸ್ ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ. ಡಿಗ್ರಿ ಪದವಿ, ಸ್ನಾತಕೋತ್ತರ, ಪಿಜಿ ಅಂತಿಮ ವರ್ಷದಲ್ಲಿ ಓದುತ್ತಿರುವ ಮತ್ತು ಮುಗಿಸಿದ ವಿದ್ಯಾರ್ಥಿಗಳಿಗೆ ಸುವರ್ಣಕಾಶ ಕಲ್ಪಿಸಲಾಗಿದೆ. ಉದ್ಯೋಗ ಮೇಳದಲ್ಲಿ ಆಯ್ಕೆಗೊಂಡಂತ ವಿದ್ಯಾರ್ಥಿಗಳಿಗೆ ಸ್ಥಳದಲ್ಲೇ ನೇಮಕಾತಿ ಆದೇಶ ಪತ್ರವನ್ನು ನೀಡಲಾಗುತ್ತದೆ. ಈ ಉದ್ಯೋಗ ಮೇಳದಲ್ಲಿ ವಿವಿಧ ಕಂಪನಿ ಗಳು ಪಾಲ್ಗೊಳ್ಳುತ್ತಿವೆ. ಹಿಂದುಳಿದ ತಾಲೂಕಿನಲ್ಲಿ ಇಂತಹ ಸೌಲಭ್ಯಗಳು ಆಯೋಜಿಸಲಾಗಿದ್ದು, ಪದವಿ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಭಾಗವಹಿಸುತ್ತಿರುವ ಹಲವು ಕಂಪನಿಗಳಿಗೆ ಪ್ರತ್ಯೇಕ ಕೋಣೆಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಉದ್ಯೋಗ ಮೇಳ ಸಂದರ್ಶನಕ್ಕೆ ಬರುವಂತಹ ವಿದ್ಯಾರ್ಥಿಗಳಿಗೆ ಹಲವು ಸೌಲಭ್ಯಗಳು ಕಲ್ಪಿಸಲಾಗಿದೆ. ಪದವಿ ವಿದ್ಯಾರ್ಥಿಗಳಿಗೆ ಅವಕಾಶ ಸಿಗುತ್ತಿಲ್ಲ ಎನ್ನುವ ಕಾರಣಕ್ಕೆ ಇಂತಹ ಕಾರ್ಯಕ್ರಮ ಆಯೋಜಿಸಲಾಗಿದೆ. ಈಗಾಗಲೇ ಆನ್‌ಲೈನ್ ಮೂಲಕ ನೋಂದಣಿ ವಿದ್ಯಾರ್ಥಿಗಳಿಗೆ ಸೇರಿದಂತೆ ಪದವಿ ವಿವಿಧ ವಿಭಾಗದ ವಿದ್ಯಾರ್ಥಿಗಳಿಗೂ ಅವಕಾಶ ನೀಡಲಾಗುತ್ತದೆ. ಒಂದು ಹೊಸತನ ಬಡವಿದ್ಯಾರ್ಥಿಗಳಿಗೆ ಉದ್ಯೋಗ ನಿಟ್ಟಿನಲ್ಲಿ

2ನೇಪುಟಕ್ಕೆ

# ರಾಯಚೂರ ಜಿಲ್ಲೆಯಲ್ಲಿ ಭಾರಿ ಮಳೆ ಸಾಧ್ಯತೆ: ಮುಂಜಾಗ್ರತಾ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.9–** ಹವಾಮಾನ ಇಲಾಖೆಯ ವರದಿಯನ್ವಯ ಮೇ 24 ರಂದು ನೈಋತ್ಯ ಮಾನ್ಸೂನ್ ಕೇರಳ ಪ್ರವೇಶಿಸಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಭಾರಿ ಮಳೆ ಹಾಗೂ ಪ್ರವಾಹ ಕುರಿತು ಮುಂಜಾಗೃತಾ ಕ್ರಮಕೈಗೊಳ್ಳುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಮನಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಯಾವುದೇ ಸಂದರ್ಭದಲ್ಲಿ ಭಾರಿ ಮಳೆ ಹಾಗೂ ಪ್ರವಾಹ ಎದುರಾದಲ್ಲಿ ಸಮರ್ಥವಾಗಿ ಎದುರಿಸಲು ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿಗಳು ಸಿದ್ಧರಿರಬೇಕು. ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಯು ಕೇಂದ್ರ ಸ್ಥಾನದಲ್ಲಿದ್ದು ಪ್ರವಾಹ ಹಾಗೂ ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನದಿ, ಹಳ್ಳ, ಕೆರೆ ದಡದಲ್ಲಿ ಬಟ್ಟೆ ತೊಳಿಯುವುದು, ಈಜಾಡುವುದು, ದನ ಅಥವಾ ಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ ಸಂಚರಿಸುವುದು ಮತ್ತು ಇತರೆ ಚಟುವಟಿಕೆ ನಡೆಸದಂತೆ ಕ್ರಮವಹಿಸಬೇಕು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ, ಶಾಲೆಗಳು ಹಾಗೂ ಇತರೆ ಕಟ್ಟಡಗಳು ಕುಸಿಯುವ ಸಾಧ್ಯತೆ ಇರುವುದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿರುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ಸುರಕ್ಷತೆಯ ಮುನ್ನೆಚ್ಚರಿಕೆಯ ಕ್ರಮ ತೆಗೆದುಕೊಳ್ಳವುದು ಅಥವಾ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಾಗೃತಿ ಮೂಡಿಸುವುದು. ನದಿ ದಡದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ಅಪಾಯವಿರುವ ನದಿ ಅಥವಾ ಹಳ್ಳಗಳಲ್ಲಿ ಈಜಾಡುವುದು ಮತ್ತು ಪೋಟೋ, ಸೆಲ್ಫಿ ತೆಗೆಯದಂತೆ ಕ್ರಮವಹಿಸುವುದು.

ಭಾರಿ ಮಳೆ ಹಾಗೂ ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು, ಮೈಕ್ ಮೂಲಕ ಜಾಗೃತಿ ಮೂಡಿಸುವುದು. ಭಾರಿ ಮಳೆ ಹಾಗೂ ಪ್ರವಾಹದಿಂದ ಹಾನಿಯಾದ ಬಗ್ಗೆ ಪ್ರಾಥಮಿಕ ವರದಿಯನ್ನು ಪ್ರತಿ ದಿನ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

**ಸಹಾಯವಾಣಿ:** ಮಳೆ ಹಾಗೂ ಪ್ರವಾಹ ಸೇರಿದಂತೆ ಇತರೆ ಸಮಸ್ಯೆಗಳ ತುರ್ತು ಪರಿಹಾರಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು

2ನೇ ಪುಟಕ್ಕೆ

# ಪ್ಲಾಸ್ಟಿಕ್ ಮುಕ್ತ ಲಿಂಗಸುಗೂರು ಅಭಿಯಾನಕ್ಕೆ ಚಾಲನೆ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.9–** ಉತ್ತಮ ಜೀವನಕ್ಕಾಗಿ ಪರಿಸರವನ್ನು ಉಳಿಸಿ, ಬೆಳೆಸಿ ಮತ್ತು ಲಿಂಗಸುಗೂರಿನನ್ನ ಪ್ಲಾಸ್ಟಿಕ್ ಮುಕ್ತವನ್ನಾಗಿ ಮಾಡುವಂತೆ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಉಂಡಿ ಮಂಜುಳಾ ಶಿವಪ್ಪ ಕರೆ ನೀಡಿದರು.

ಸೋಮವಾರ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ತಾಲೂಕು ಆಡಳಿತ, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಶಿಕ್ಷಣ ಇಲಾಖೆ, ಮತ್ತು ಪೊಲೀಸ್ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ತಾಲೂಕಿನ ಹೊಸ ನ್ಯಾಯಾಲಯ ಆವರಣ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ "ಪ್ಲಾಸ್ಟಿಕ್ ಮುಕ್ತ ಲಿಂಗಸುಗೂರು ಅಭಿಯಾನ" ಕಾರ್ಯಕ್ರಮಕ್ಕೆ ಅವರು ಸಸಿಗೆ ನೀರೆರೆಯುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಅಂಬಣ್ಣ ಕೆ., ಸಹಾಯಕ ಸರ್ಕಾರಿ ಅಭಿಯೋಜಕರಾದ ವಿರುಪಣ್ಣ ದುಮತಿ, ತಾಲೂಕು ವಕೀಲರ ಸಂಘದ ಅಧ್ಯಕ್ಷರಾದ ಭೂಪನಗೌಡ ವಿ. ಪಾಟೀಲ್, ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ವಿದ್ಯಾಶ್ರೀ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಶೈಲ ವಾಗಮೋರೆ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಭೀಮಣ್ಣ, ಪಿಎಸ್‌ಐ ರತ್ನಮ್ಮ, ಶಿಕ್ಷಣ ಸಂಯೋಜಕರಾದ ಬಸವರಾಜ ಗುಡಿಹಾಳ, ಸಿ.ಆರ್.ಪಿ. ಮೌನೇಶ, ಆದರ್ಶ ವಿದ್ಯಾಲಯದ ಮುಖ್ಯೋಪಾಧ್ಯರಾದ ದೊಡ್ಡನಗೌಡ ಪಾಟೀಲ್, ವೆಂಕೋಬ ಗುಡದನಾಳ, ನ್ಯಾಯಾಲಯದ ಸಿಬ್ಬಂದಿಗಳು, ವಕೀಲರುಗಳು, ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ದಯಾನಂದರವರ ಅಮಾನತು ಖಂಡನೀಯ: ಹನುಮೇಶ ನಾಯಕ



**ಯುವ ಮಾರ್ಗ ಸುದ್ದಿ**

**ಮಾನ್ವಿ ಜೂ.09–** ಸರ್ಕಾರದ ವೈಫಲ್ಯಗಳನ್ನು ಮುಚ್ಚಿಕೊಳ್ಳುವುದಕ್ಕೆ ಪ್ರಾಮಾಣಿಕ ಪೊಲೀಸ್ ಅಧಿಕಾರಿಯನ್ನು ಸಸ್ಪೆಂಡ್ ಮಾಡಿರುವುದು ಅನ್ಯಾಯವಾಗಿದೆ.ನಾಯಕ ಸಮಾಜದ ಪ್ರಮಾಣಿಕ ಮತ್ತು ದಕ್ಷ ಅಧಿಕಾರಿಗಳನ್ನು ಮುಗಿಸುವ ಉನ್ನರವೋ ತಿಳಿಯುತ್ತಿಲ್ಲ. ಸರ್ಕಾರದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ತಮ್ಮ ಅಸಡ್ಡೆಯಿಂದ ಆಗಿರುವ ಅನಾಹುತಕ್ಕೆ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಟ್ಟು ಮರ್ಯಾದೆ ಉಳಿಸಿಕೊಳ್ಳಬೇಕಿತ್ತು.ಆದರೆ ವಾಲ್ಮೀಕಿ ನಾಯಕ ಜನಾಂಗದ ದಕ್ಷ ಹಿರಿಯ ಪೊಲೀಸ್ ಅಧಿಕಾರಿ ಬೆಂಗಳೂರು ನಗರ ಆಯುಕ್ತರಾದ ಬಿ.ದಯಾನಂದ ಅವರನ್ನು ಅಮಾನತು ಶಿಕ್ಷೆ ಕೊಟ್ಟಿರುವುದು ದಕ್ಷ ಅಧಿಕಾರಿಗಳಿಗೆ ಮಾಡಿದ ಅನ್ಯಾಯವಾಗಿದೆ ಎಂದು ಹನುಮೇಶ ನಾಯಕ ಸಾದಾಪುರ ಸರಕಾರದ ವಿರುದ್ಧ ಪತ್ರಿಕಾ ಹೇಳಿಕೆ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.ವಾಲ್ಮೀಕಿ ನಾಯಕ ಜನಾಂಗದ ಸಚಿವರುಗಳಿಗೆ ಶಾಸಕರುಗಳಿಗೆ ಸಮಾಜದ ಬಗ್ಗೆ ಸ್ವಲ್ಪವಾದರೂ ಕಾಳಜಿ ಇದ್ದರೆ ಇಂತಹ ಅನಾಹುತಗಳು ಆಗಲು ಬಿಡುತ್ತಿದ್ದಿಲ್ಲ.ಸರಕಾರ ವಾಲ್ಮೀಕಿ ಜನಾಂಗವನ್ನು ಗುರಿಯಾಗಿಸಿಕೊಂಡಿದೆ ಎನಿಸುತ್ತಿದೆ ಈ ಘಟನೆಗೆ ಸಂಬಂಧಿಸಿದಂತೆ ಮಾನ್ಯ ಗೃಹ ಸಚಿವರು ಕಾರಣ ಅವರನ್ನು ಯಾಕೆ ಸಚಿವ ಸ್ಥಾನದಿಂದ ವಜಾಗೊಳಿಸಲಿಲ್ಲ ಎಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾ ಅಧ್ಯಕ್ಷ ಹನುಮೇಶ ನಾಯಕ ಸಾದಾಪುರ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

ಯುವ ಮಾರ್ಗ

ಮಂಗಳವಾರ : 10-06-2025

## ಮೊದಲನೇಯ ಪುಟದಿಂದ

# ಖಾತೆ ಬದಲಾವಣೆ ಸುಳ್ಳು, ಸವಾಲು ಎದುರಿಸುವೆ

ಸುಳ್ಳು ಸುದ್ದಿ ಹಾಕಿ ನನ್ನ ವ್ಯಕ್ತಿತ್ವಕ್ಕೆ ಧಕ್ಕೆ ತರುವುದು ಶೋಭೆ ತರುವುದಿಲ್ಲ ಎಂದರು.

ನಾನು ಮಾಧ್ಯಮ ಮಿತ್ರರಿಗೆ ಸದಾ ಆಭಾರಿಯಾಗಿದ್ದೇನೆ. ಈ ರೀತಿಯ ಸುದ್ದಿ ಪ್ರಕಟಿಸುವ ಮೊದಲು ನನ್ನನ್ನು ಒಂದು ಮಾತು ಕೇಳ ಬಹುದಿತ್ತು. ನನಗೂ ಕ್ಷೇತ್ರದ ಮತದಾರರಿದ್ದಾರೆ, ಅಭಿಮಾನಿಗಳಿದ್ದಾರೆ, ಬೆಂಬಲಿಗರಿದ್ದಾರೆ. ಅವರೆಲ್ಲಾ ನನ್ನ ಬಗ್ಗೆ ಏನು ತಿಳಿದುಕೊಳ್ಳುತ್ತಾರೆ. ನಾನು ಸವಾಲು ಎದುರಿಸುತ್ತೇನೆಯೇ ಹೊರತು ಹೆದರಿ ಓಡಿ ಹೋಗುವ ಹೇಡಿಯಲ್ಲ ಎಂದು ಅವರು ಹೇಳಿದರು.

ಹೈಕಮಾಂಡ್‌ಗೆ ಮಾಹಿತಿ

ಬೆಂಗಳೂರಿನ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ತಮ್ಮ ಜತೆ ಮಾತನಾಡಿದರು ಎಂಬ ಸುದ್ದಿಗಳನ್ನು ತಳ್ಳಿ ಹಾಕಿದ ಅವರು, ಹೈಕಮಾಂಡ್ ನಾಯಕರು ನಾನು ಸೇರಿದಂತೆ ಮುಖ್ಯಮಂತ್ರಿಗಳು, ಕೆಪಿಸಿಸಿ ಅಧ್ಯಕ್ಷರು ಎಲ್ಲರಿಗೂ ದೂರವಾಣಿ ಕರೆ ಮಾಡಿ ಮಾತನಾಡುತ್ತಾರೆ. ಕಾಲ್ತುಳಿತ ಪ್ರಕರಣದ ಬಗ್ಗೆ ಪಕ್ಷದ ವರಿಷ್ಠರು ದೂರವಾಣಿ ಮಾಡಿ ಮಾಹಿತಿ ಕೇಳಿದ್ದರು. ಅವರಿಗೂ ಮಾಹಿತಿ ಒದಗಿಸಿದ್ದೇನೆ. ಅವರಿಗೆ ಇಲ್ಲಿ ಕಾಂಗ್ರೆಸ್ ಸರ್ಕಾರವಿದೆ. ಏನಾಗಿದೆಯೋ ಎಂಬ ಆತಂಕವಿದೆ. ಹಾಗಾಗಿ ನಮ್ಮ ಪಕ್ಷದ ಪ್ರಧಾನ ಕಾರ್ಯದರ್ಶಿಗಳು ದೂರವಾಣಿ ಕರೆ ಮಾಡಿ ಮಾಹಿತಿ ಕೇಳುವುದು ಸಹಜ. ಆ ರೀತಿ ನನಗೂ ದೂರವಾಣಿ ಮಾಡಿದ್ದರು, ಮಾಹಿತಿಯನ್ನ ಕೊಟ್ಟಿದ್ದೇನೆ.

ರಾಹುಲ್‌ಗಾಂಧಿಯವರು ದೂರವಾಣಿ ಕರೆ ಮಾಡಿದ್ದರು ಎಂಬುದು ಸುಳ್ಳು. ಹಾಗೆಯೇ ನನಗೆ ಹೈಕಮಾಂಡ್ ದೆಹಲಿಗೆ ಬರುವಂತೆ ಸೂಚಿಸಿದೆ ಎಂಬುದು ಸುಳ್ಳು ಎಂದು ಪರಮೇಶ್ವರ್ ಹೇಳಿದರು.

ಎನ್‌ಐಗೆ ತನಿಖೆ: ಪತ್ರ ಬಂದಿದೆ

ಮಂಗಳೂರಿನ ಸುಹಾಸ್ ಶೆಟ್ಟಿ ಕೊಲೆ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸುವಂತೆ ಕೇಂದ್ರ ಗೃಹ ಸಚಿವಾಲಯದಿಂದ ಪತ್ರ ಬಂದಿದೆ. ಈ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಒಂದು ತೀರ್ಮಾನ ಮಾಡುತ್ತೇವೆ ಎಂದು ಅವರು ಹೇಳಿದರು.

ಎನ್‌ಐಎ ತನಿಖೆಗೆ ಯಾರು ಕೋರಿದ್ದಾರೋ ಗೊತ್ತಿಲ್ಲ. ಆದರೂ ಕೇಂದ್ರ ಗೃಹ ಸಚಿವಾಲಯದಿಂದ ಎನ್‌ಐಎ ತನಿಖೆಗೆ ಪತ್ರ ಬಂದಿದೆ ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ನನಗೆ ತಿಳಿಸಿದ್ದಾರೆ. ಈ ಬಗ್ಗೆ ಎಲ್ಲರೊಂದಿಗೆ ಚರ್ಚಿಸಿ ಒಂದು ಸೂಕ್ತ ತೀರ್ಮಾನ ಮಾಡುತ್ತೇನೆ ಎಂದು ಅವರು ತಿಳಿಸಿದರು.

ಪ್ರತಿಕ್ರಿಯೆ ಇಲ್ಲ

ಬೆಂಗಳೂರಿನ ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ವಿಧಾನಸೌಧದ ಮುಂದೆ ಕಾರ್ಯಕ್ರಮ ನಡೆಸುವುದು ಬೇಡ ಎಂದು ವಿಧಾನಸೌಧದ ಭದ್ರತಾ ವಿಭಾಗದ ಡಿಸಿಪಿ ಸರ್ಕಾರಕ್ಕೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು, ಈ ಬಗ್ಗೆ ಈಗ ನ್ಯಾ. ಮೈಕಲ್ ಖುನ್ಹಾ ಅವರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ನಡೆಯುತ್ತಿದೆ. ತನಿಖೆ ನಡೆಯುತ್ತಿರುವಾಗ ನಾವು ಪ್ರತಿಕ್ರಿಯೆ ನೀಡುವುದರಿಂದ ತನಿಖೆಯ ಮೇಲೆ ಪರಿಣಾಮ ಬೀರಿ ತನಿಖೆಯ ದಿಕ್ಕನ್ನೇ ಬದಲಿಸುವ ಸಾಧ್ಯತೆ ಇರುತ್ತದೆ. ಜತೆಗೆ ಸಬ್‌ಜ್ಯೂಡಿಸ್ ಆಗುತ್ತದೆ. ಹಾಗಾಗಿ ಈ ಬಗ್ಗೆ ನಾನು ಹೆಚ್ಚು ಮಾತನಾಡಲ್ಲ ಎಂದರು.

ಬಹಿರಂಗವಾಗಿ ನಾವು ಈ ಬಗ್ಗೆ ಏನನ್ನು ಮಾತನಾಡಲ್ಲ. ತನಿಖಾ ಆಯೋಗ ಮಾಹಿತಿಯನ್ನು ಕೇಳಿದರೆ ಒದಗಿಸುತ್ತೇವೆ. ತನಿಖೆಯಾಗಲಿ, ತನಿಖೆಯ ವರದಿ ಬಂದ ನಂತರ ಈ ಬಗ್ಗೆ ಮಾತನಾಡುವುದು ಸೂಕ್ತ ಎಂದು ಅವರು ಹೇಳಿದರು.

# ರಾಯಚೂರ ಜಿಲ್ಲೆಯಲ್ಲಿ ಭಾರಿ ಮಳೆ ಸಾಧ್ಯತೆ: ಮುಂಜಾಗ್ರತಾ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ

ಮಟ್ಟದಲ್ಲಿ ಸಹಾಯವಾಣಿ ಕೇಂದ್ರಗಳು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರ: 08532-226383 ಅಥವಾ ರಾಯಚೂರು ಜಿಲ್ಲಾಧಿಕಾರಿಗಳ ಕಾರ್ಯಾಲಯ: 1077, ರಾಯಚೂರು ಮಹಾನಗರ ಪಾಲಿಕೆ: 08532-200551, ರಾಯಚೂರು ತಹಶೀಲ್ದಾರ್ ಕಾರ್ಯಾಲಯ: 08532-200772, ಮಾನವಿ ತಹಶೀಲ್ದಾರ್ ಕಾರ್ಯಾಲಯ: 08538-220239, ಸಿಂಧನೂರು ತಹಶೀಲ್ದಾರ್ ಕಾರ್ಯಾಲಯ: 9035640154, ಲಿಂಗಸೂಗೂರು ತಹಶೀಲ್ದಾರ್ ಕಾರ್ಯಾಲಯ: 08537-275247, ದೇವದುರ್ಗ ತಹಶೀಲ್ದಾರ್ ಕಾರ್ಯಾಲಯ: 08531-200117, ಸಿರವಾರ ತಹಶೀಲ್ದಾರ್ ಕಾರ್ಯಾಲಯ: 08538-200082, ಮಸ್ಕಿ ತಹಶೀಲ್ದಾರ್ ಕಾರ್ಯಾಲಯ: 08537-295504ಗೆ ಸಾರ್ವಜನಿಕರು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ಉದ್ಯೋಗ ಮೇಳ: ವಿದ್ಯಾರ್ಥಿಗಳಿಗೆ ಸುವರ್ಣ ಅವಕಾಶ

ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಹೇಳಿದರು. ಖೇಣೇದ್ ಮುರಿಗೆಪ್ಪ ಮಹಾವಿದ್ಯಾಲಯ ಆಡಳಿತ ಮಂಡಳಿ ಹಲವು ಕಾರ್ಯಕ್ರಮ ಮಾಡುವ ಮೂಲಕ ಜನರಿಗೆ ಒಂದು ಅನುಕೂಲ ಕಲ್ಪಿಸಲಾಗಿದೆ. ಬೆಂಗಳೂರು ಸೇರಿದಂತೆ ವಿವಿಧ ಕಂಪನಿಗಳು ಭಾಗವಹಿಸುತ್ತಿರುವ ಹಿನ್ನೆಲೆ ಸಂದರ್ಶದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು ಆಯ್ಕೆಗೊಂಡಾಗ ಸ್ಥಳದಲ್ಲೇ ಆದೇಶ ಪತ್ರವನ್ನು ನೀಡಲಾಗುತ್ತದೆ ಎಂದು ಹೇಳಿದರು. ಇಂತಹ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಮೂಲಕ ಒಂದು ಸುರ್ವಣ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಬಸವರಾಜ ಯಾಟಗಲ್ ಸೇರಿದಂತೆ ಇತರರು ಇದ್ದರು.

# ರಾಯಚೂರ ಜಿಲ್ಲೆಯಲ್ಲಿ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಯನ ಪ್ರವಾಸ

**ರಾಯಚೂರು,ಜೂ.9–** ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಾದ ಟಿ.ಎ.ಶರವಣ ಹಾಗೂ ಸಮಿತಿಯ ಸದಸ್ಯರ ತಂಡವು ಜೂನ್ 10 ರಿಂದ 11 ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಅಧೀನ ಕಾರ್ಯದರ್ಶಿ ಅವರು ತಿಳಿಸಿದ್ದಾರೆ.

ಅಧ್ಯಕ್ಷರು ಹಾಗೂ ಸದಸ್ಯರು ಮತ್ತು ಅಧಿಕಾರಿ ಸಿಬ್ಬಂದಿಯನ್ನೊಳಗೊಂಡ ತಂಡವು ಜೂನ್ 10ರ ಮಧ್ಯಾಹ್ನ 3 ಗಂಟೆಗೆ ಕಲಬುರಗಿಯಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಸಂಜೆ 6.15ಕ್ಕೆ ರಾಯಚೂರು ಜಿಲ್ಲೆಯ ಹಟ್ಟಿ ಚಿನ್ನದ ಗಣಿಗೆ ಆಗಮಿಸಿ ವಾಸ್ತವ್ಯ ಮಾಡಲಿದೆ.

ಜೂನ್ 11ರ ಬೆಳಿಗ್ಗೆ 10 ಗಂಟೆಗೆ ಹಟ್ಟಿಯಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಭರವಸೆಗಳ ಸಂಖ್ಯೆ:7622 ಮತ್ತು 7387ಕ್ಕೆ ಸಂಬಂಧಿಸಿದಂತೆ ಸಭೆ ನಡೆಸುವರು. ಬಳಿಕ 11.45ಕ್ಕೆ ಹಟ್ಟಿ ಚಿನ್ನದ ಗಣಿ ವೀಕ್ಷಣೆ ಮಾಡುವರು. ಮಧ್ಯಾಹ್ನ 2 ಗಂಟೆಗೆ ಭೋಜನ ವಿರಾಮ. ಮಧ್ಯಾಹ್ನ 3 ಗಂಟೆಗೆ ಅಲ್ಲಿಂದ ನಿರ್ಗಮಿಸಿ ರಾಯಚೂರ ನಗರಕ್ಕೆ ಆಗಮಿಸುವರು.

ಮಧ್ಯಾಹ್ನ 3.30ಕ್ಕೆ ಕೃಷಿ ಇಲಾಖೆಯ ಭರವಸೆ ಸಂಖ್ಯೆ:8191ಕ್ಕೆ ಸಂಬಂಧಿಸಿದಂತೆ ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡುವರು.

ಮಧ್ಯಾಹ್ನ 4.30ಕ್ಕೆ ರಾಯಚೂರು ನಗರದಲ್ಲಿರುವ ಇಂಡಸ್ಟ್ರಿಯಲ್ ಗ್ರೋತ್ ಸೆಂಟರ್‌ನ ಮೂಲ ಸೌಲಭ್ಯಗಳ ಪರಿಶೀಲನೆ ಮಾಡುವರು. ಬಳಿಕ ರಾತ್ರಿ 11.55ಕ್ಕೆ ರಾಯಚೂರಿನಿಂದ ರೈಲ್ವೆ ಮಾರ್ಗವಾಗಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಅಧೀನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111, 9743496111

# ಮೃಗಶಿರ : ಉಚಿತ ಮಾತ್ರೆ ಹಾಗೂ ರೋಗ ನಿರೋಧಕ ಕಷಾಯ ವಿತರಣೆ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.9–** ಪ್ರತಿ ವರ್ಷದಂತೆ ಈ ವರ್ಷವೂ ಮೃಗಶಿರ ಮಳೆ ನಕ್ಷತ್ರ ಆಗಮಿಸುವ ಸಮಯಕ್ಕೆ ವೈದ್ಯ ಕುಮಾರಸ್ವಾಮಿ ಸ್ಥಾಪಿಸಿದ, ಶರಣ ಶ್ರೀ ವೈದ್ಯ ಸಂಗಣ್ಣ ಗ್ರಾಮೀಣ ಆರೋಗ್ಯ ಅಭಿವೃದ್ಧಿ ಟ್ರಸ್ಟ್ ವತಿಯಿಂದ ,ಜನರಿಗೆ ಉಚಿತ ಮಾತ್ರೆ ಹಾಗೂ ರೋಗ ನಿರೋಧಕ ಕಷಾಯ ವಿತರಣೆ ಮಾಡಲಾಯಿತು.ಪಟ್ಟಣದ ಹೊರ ವಲಯದ ಜೆ.ಕೆ ಸ್ವಿಮ್ಮಿಂಗ್ ಪೂಲ್ ಆವರಣದಲ್ಲಿ ನಡೆದ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಡಾ.ಮರಿಸ್ವಾಮಿ ಮಾತನಾಡಿ, ಮೃಗಶಿರ ಮಳೆ ನಕ್ಷತ್ರ ಪ್ರವೇಶದ ನಂತರ ವಾತಾವರಣ ದಲ್ಲಿ ಉಂಟಾಗುವ ತಂಪು ಹವಾಮಾನ ದಿಂದ ಮನುಷ್ಯರಲ್ಲಿ ಶೀತ ರೋಗಗಳು, ದಮ್ಮು, ಕೆಮ್ಮು,ಕಫ,ಉಬ್ಬಸ,ಅಸ್ತಮಾ,ಅಲರ್ಜಿ ರೋಗಗಳು ಕಾಣಿಸಿ ಕೊಳ್ಳುವುದನ್ನು ತಡೆಗಟ್ಟಲು ಈ ದಿನದಂದು ಮಾತ್ರೆ ಹಾಗೂ ರೋಗ ನಿರೋಧಕ ಕಷಾಯ ಸೇವಿಸುವುದು ಆರೋಗ್ಯ ದೃಷ್ಠಿಯಿಂದ ಉತ್ತಮ ಎಂದರು.ನಂತರ ಔಷಧಿ ವಿತರಿಸಿ ಮಾತನಾಡಿದ ಟ್ರಸ್ಟನ ಅಧ್ಯಕ್ಷ ವೈದ್ಯ ಕುಮಾರಸ್ವಾಮಿ ,ಪ್ರತಿ ವರ್ಷದಂತೆ ಈ ವರ್ಷವೂ ಮೃಗಶಿರ ನಕ್ಷತ್ರ ಪ್ರವೇಶಿಸುವ ಪ್ರಯುಕ್ತ,ಉಚಿತ ಔಷದಿ ವಿತರಣೆ ಮಾಡುತ್ತಿದ್ದು,ನಮ್ಮಲ್ಲಿಯ ಔಷಧಿ ವಿಶೇಷ ಗುಣ ಹೊಂದಿದ್ದು, ಮೇ 08 ರಂದು ಮೃಗಶಿರ ನಕ್ಷತ್ರ ಪ್ರವೇಶಿಸುವ ನಿಗದಿತ ಸಮಯಕ್ಕೆ ಈ ಮಾತ್ರೆ ಮತ್ತು ಕಷಾಯ ಸೇವನೆ ಬಳಕೆ ಮಾಡಬೇಕು, ಆರೋಗ್ಯಯುತ ವ್ಯಕ್ತಿ ಕೂಡ ರೋಗನಿರೋಧಕ ಶಕ್ತಿ ಹೆಚ್ಚಿಸಲು ಈ ಕಷಾಯವನ್ನು ಸೇವಿಸಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಈ ವೇಳೆ ಪುರಸಭೆ ಸದಸ್ಯರಾದ ಪ್ರಭುಸ್ವಾಮಿ ಅತ್ನೂರು, ಪಂಚವಟಿ ಆಯುರ್ವೇದ ಪಂಚಕರ್ಮ ಚಿಕಿತ್ಸಾ ಕೇಂದ್ರದ ಮಾಲೀಕರಾದ ಜಗನ್ನಾಥ ಚಿತ್ತಾಪುರ,ಸಿಬ್ಬಂದಿಗಳಾದ ಚಂದ್ರಶೇಖರ್, ಸುನೀತ ಶಿವಮೊಗ್ಗ, ಮಂಜುನಾಥ,ಗುರು ಪತ್ತಾರ್, ಬಸವರಾಜ್ ಸ್ವಾಮಿ ಹಿರೇಮಠ್ ಸೇರಿದಂತೆ ಹಲವಾರು ಜನ ಉಚಿತ ಔಷಧಿಯ ಸದುಪಯೋಗವನ್ನು ಪಡೆದುಕೊಂಡರು.

# ಕರ್ನಾಟಕ ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರು,ಜೂ.9–** ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಯೋಜನೆಗಳು:** ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಡಿ ಸಹಾಯಧನ ಮತ್ತು ಸಾಲ-ಸೌಲಭ್ಯ ನೀಡಲಾಗುವುದು.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾ ಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಪ್ರವರ್ಗ-1ರ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಕ್ಕೆ ಸೇರಿದವರಾಗಿರಬೇಕು.

ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ವಿಳಾಸ: www.kaad.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ಅಥವಾ ನಿಗಮದ **ಸಹಾಯವಾಣಿ ಸಂಖ್ಯೆ:** 080-22374832, 8050770004 ಅಥವಾ 8050770005 ಅಥವಾ ರಾಯಚೂರು ನಿಗಮದ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532-250440ಗೆ ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜೂ.9–** ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಸರ್ಕಾರದ ಆದೇಶದಂತೆ ಪ್ರವರ್ಗ-1ರ 6(ಎ) ಯಿಂದ 6(ಎ.ಕೆ)ವರೆಗೆ ಬರುವ ಬೆಸ್ತ, ಅಂಬಿಗ, ಅಂಬಿ, ಗಂಗಾಮತ, ಕಬ್ಬಲಿಗೆ, ಕೋಲಿ, ಮತ್ತು ಇದರ ಉಪಜಾತಿಗಳ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

**ಯೋಜನೆಗಳು:** ಅರಿವು ಶೈಕ್ಷಣಿಕ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಪುನರ್), ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ ನೇರಸಾಲ ಮತ್ತು ಸಹಾಯಧನ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆಗಳಡಿ ಸಹಾಯಧನ ಮತ್ತು ಸಾಲ-ಸೌಲಭ್ಯ ನೀಡಲಾಗುವುದು.

ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆ ಜೋಡಣೆಯಾಗಿರಬೇಕು. ಒಂದು ಕುಟುಂಬದ ಒಬ್ಬರಿಗೆ ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

ಕಳೆದ ಮೂರು ವರ್ಷದಿಂದ ಸರ್ಕಾರದ ಯಾವುದೇ ನಿಗಮ ಅಥವಾ ಇಲಾಖೆಗಳಲ್ಲಿ ಯೋಜನೆಯ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಮತ್ತು 2024-25ನೆ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ಫಲಾಪೇಕ್ಷಿಗಳು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ನಿಗಮವು ಅನುಷ್ಠಾನಗೊಳಿಸುವ ಯೋಜನೆಗಳಲ್ಲಿ ಸರ್ಕಾರದ ಮತ್ತು ನಿರ್ದೇಶಕ ಮಂಡಳಿ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯ ಬಯಸುವವರು ಸಹ ಆನ್‌ಲೈನ್‌ಲ್ಲಿ ಅರ್ಜಿ ಸಲ್ಲಿಸುವುದು ಅಗತ್ಯವಾಗಿದೆ.

ಅರ್ಹ ಫಲಾಪೇಕ್ಷಿಗಳು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 04 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ : http://ambigaradevelopment.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ: 080-22864099 ಅಥವಾ ನಿಗಮದ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532-250440ಗೆ ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಾಯುಕ್ತ ಪೊಲೀಸನಿಂದ ಸಾರ್ವಜನಿಕರ ಕುಂದುಕೊರತೆ ಸಭೆ

**ರಾಯಚೂರು.ಜೂ.9–**ಜಿಲ್ಲಾ ಲೋಕಾಯುಕ್ತ ಪೊಲೀಸ್ ಇಲಾಖೆಯಿಂದ ಜೂನ್ 11ರ ಬುಧವಾರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲೆಯ ದೇವದುರ್ಗದ ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳ ಸಭೆ ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳ್ಳಿಸಬೇಕೆಂದು ರಾಯಚೂರು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್.ಚಿಟಗುಬ್ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವ ಮಾರ್ಗ

ಮಂಗಳವಾರ : 10–06–2025

# ಅದಮ್ಯ ಸ್ಫೂರ್ತಿ ಮತ್ತು ತಂತ್ರಜ್ಞಾನ ನಿಪುಣೆ ಜಿ.ಮಾಧವಿ ಲತಾ

ಮೊನ್ನೆ ಪ್ರಧಾನಿ ನರೇಂದ್ರ ಮೋದಿಯವರು ಲೋಕಾರ್ಪಣೆ ಮಾಡಿದ ಜಮ್ಮು ಕಾಶ್ಮೀರದ ರಜಾಯಿ ಜಿಲ್ಲೆಯ ಚೆನಾಬ್ ನದಿಗೆ ಕಟ್ಟಿದ ಅತಿ ದೊಡ್ಡ

ಕಮಾನು ಸೇತುವೆ ಇಡೀ ಜಗತ್ತಿನಲ್ಲಿ ಆರ್ಕಿಟೆಕ್ಟ್ ತಂತ್ರಜ್ಞಾನದ ವಿಸ್ಮಯವಾಗಿ ಗುರುತಿಸಲ್ಪಟ್ಟಿದೆ. ಕಣಿವೆ ರಾಜ್ಯವಾದ ಕಾಶ್ಮೀರದ ಬಾರಾಮುಲ್ಲಾ ಶ್ರೀನಗರ ಮತ್ತು ಉದಂಪುರ್ ನಗರಗಳನ್ನು ಸೇರಿಸುವ ಒಟ್ಟು ಇನ್ನೂರೆಪ್ಪತ್ತೆರಡು ಕಿಲೋಮೀಟರ್ ಉದ್ದದ ರೈಲು ಮಾರ್ಗದಲ್ಲಿ ಒಂದು ಕಾಲು(1 1/4) ಕಿಲೋ ಮೀಟರ್ಗಿಂತ ಹೆಚ್ಚು ಉದ್ದವಾದ ಸೇತುವೆಯ ಎತ್ತರ 350 ಮೀಟರ್ಗಿಂತಲೂ ಹೆಚ್ಚಿದ್ದು ಸೇತುವೆಯ ಒಟ್ಟು ನಿರ್ಮಾಣ ವೆಚ್ಚ 14 ನೂರು ಕೋಟಿಗಿಂತಲೂ ಹೆಚ್ಚು. ಕಣಿವೆ ರಾಜ್ಯದ ಜನರ ಜೀವನ ಶೈಲಿಯಲ್ಲಿ ಮತ್ತು ಗತಿಯಲ್ಲಿ ಕ್ರಾಂತಿಕಾರಕ ಬದಲಾವಣೆಯನ್ನು ತರುವುದರಲ್ಲಿ ಅಚ್ಚರಿಯಿಲ್ಲ. ಪ್ರತಿ ಗಂಟೆಗೆ ನೂರು ಕಿಲೋಮೀಟರ್ ವೇಗದಲ್ಲಿ ಚಲಿಸುವ ಈ ಸೇತುವೆಯು 120 ವರ್ಷಗಳ ಕಾಲ ಬಳಸಲು ಯೋಗ್ಯವಾದುದು. ಗಂಟೆಗೆ 260 ಕಿಲೋಮೀಟರ್ ವೇಗದ ಗಾಳಿಯನ್ನು ತಡೆಯುವ ಶಕ್ತಿಯನ್ನು ಹೊಂದಿರುವ ಈ ಸೇತುವೆಯು ಭೂಕಂಪ ನಿರೋಧಕವಾಗಿದ್ದು ರಿಕ್ಟರ್ ಮಾಪನದಲ್ಲಿ ಗರಿಷ್ಟ 8ರವರೆಗಿನ ಭೂಕಂಪವನ್ನು ತಡೆಯುವ ಶಕ್ತಿಯನ್ನು ಹೊಂದಿದೆ. ಬಾಂಬ್ ಸ್ಫೋಟ ನಿರೋಧಕ ಸೇತುವೆ ಕೂಡ ಇದಾಗಿದೆ. ಅತ್ಯಂತ ದೃಢವಾದ ಮತ್ತು ಆಕರ್ಷಕವಾದ ಈ ಸೇತುವೆಯ ನಿರ್ಮಾಣ ಆಧುನಿಕ ತಂತ್ರಜ್ಞಾನಕ್ಕೆ ಸವಾಲೆಸೆಯುವಂತಿದೆ. ಹಿಮಾಲಯದ ಆಳವಾದ ಕಣಿವೆಯಲ್ಲಿ ಕವಲೊಡೆದು ಧಾರೆಗಳಾಗಿ ಹರಿಯುವ ಚೆನಾಬ್ ನದಿಗೆ ಕಟ್ಟಿರುವ ಸೇತುವೆಯು ಮಾನವನ ಮಹತ್ವಾಕಾಂಕ್ಷೆಯ ಬಾಹುಗಳನ್ನು ವಿಶಾಲವಾಗಿ ಚಾಚಿದಂತೆ ತೋರುತ್ತಿದ್ದು ಜಗತ್ತಿನ ಅತಿ ಎತ್ತರದ ರೈಲು ಸೇತುವೆ ಎಂದು ಗುರುತಿಸಲ್ಪಟ್ಟಿದೆ.

ಈ ದಿಟ್ಟ ಸಾಧನೆಯ ಹಿಂದೆ ಕೇವಲ ತಂತ್ರಜ್ಞಾನ ಮಾತ್ರ ಕಾರ್ಯನಿರ್ವಹಿಸಿಲ್ಲ ಬದಲಾಗಿ ದೃಢತೆ, ದೃಷ್ಟಿಕೋನ ಮತ್ತು ಧೈರ್ಯದ ಯಶೋಗಾಥೆಯೇ ಇದೆ.....ಅದುವೇ ಪ್ರೊಫೆಸರ್ ಎ ಎಸ್ ಮಾಧವಿ ಲತಾ ಎಂಬ ಮಹಿಳೆ.

ಸಿವಿಲ್ ಇಂಜಿನಿಯರಿಂಗ್ ನ ಒಂದು ಭಾಗವಾದ ಭೂಗರ್ಭದ ಕುರಿತಾದ ತಾಂತ್ರಿಕತೆಯ ವಿಶೇಷ ಶಾಖೆಯಲ್ಲಿ ಪರಿಣತರಾದ ಆಕೆಯ ಅತ್ಯಂತ ತಾಳ್ಮೆ, ದೃಢವಾದ ತಾಂತ್ರಿಕ ನಿರ್ಣಯಗಳು ಮತ್ತು ಆಕೆಯ ಜಾಣ್ಮೆ ಈ ಅಸಾಧ್ಯವಾದ ಕೆಲಸವನ್ನು ಸಾಧ್ಯವಾಗಿಸಿದ್ದು ಎಂದರೆ ಅಚ್ಚರಿಯೇನಲ್ಲ.

**ಯಾರು ಈ ಪ್ರೊಫೆಸರ್ ಮಾಧವಿ ಲತಾ?**

ಆಂಧ್ರಪ್ರದೇಶದ ಯದುಗುಂಡ್ಲಪಾಡು ಎಂಬ ಪುಟ್ಟ ಹಳ್ಳಿಯ ಆಕೆ 1992ರಲ್ಲಿ ಕಾಕಿನಾಡದ ಜವಾಹರಲಾಲ್ ನೆಹರು ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಸಿವಿಲ್ ಇಂಜಿನಿಯರ್ ವಿಭಾಗದ ಬಿ ಟೆಕ್ ಅನ್ನು ಪ್ರಥಮ ಶ್ರೇಣಿಯಲ್ಲಿ ಪೂರೈಸಿದರು. ನಂತರ ವಾರಂಗಲ್ ನ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯಲ್ಲಿ ಎಂ ಟೆಕ್ ಪದವಿಯನ್ನು ಚಿನ್ನದ ಪದಕದೊಂದಿಗೆ ಪೂರೈಸಿದರು. 2000 ದಲ್ಲಿ ಮದ್ರಾಸ್ (ಚೆನ್ನೈ)ನ ಐಐಟಿಯಲ್ಲಿ ಜಿಯೋ ಟೆಕ್ನಿಕಲ್ ವಿಭಾಗದಲ್ಲಿ ಪಿ ಹೆಚ್ ಡಿ ಪದವಿಯನ್ನು ಪೂರೈಸಿ ಡಾಕ್ಟರೇಟ್ ಪದವಿಯನ್ನು ಪಡೆದರು. ನಂತರ 2003 ರಲ್ಲಿ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ನಲ್ಲಿ ಪ್ರಾಧ್ಯಾಪಕಿಯಾಗಿ ಕಾರ್ಯನಿರ್ವಹಿಸಲು ಆರಂಭಿಸಿದರು.

ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ನಲ್ಲಿ (IISc) ಕಳೆದ ಎರಡು ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ಮಾಧವಿ ಲತಾ ಅವರು ಸಿವಿಲ್ ಇಂಜಿನಿಯರಿಂಗ್ ನ ಶಾಖೆಯಾದ ಜಿಯೋ ಟೆಕ್ನಿಕಲ್ ಇಂಜಿನಿಯರಿಂಗ್ನ ನುರಿತ ಗೌರವಾನ್ವಿತ ಇಂಜಿನಿಯರಿಂಗ್ ತಂತ್ರಜ್ಞಾನಿಯಾಗಿದ್ದು ಪ್ರೊಫೆಸರ್ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಭಾರತೀಯ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದ ಮಂಚೂಣಿ ನಾಯಕರಲ್ಲಿ ಧ್ರುವತಾರೆಯಂತೆ ಮಿನುಗುತ್ತಿದ್ದಾರೆ ಎಂದರೆ ತಪ್ಪಿಲ್ಲ.

.ಇಳಿಜಾರು ಸ್ಥಿರತೆ ಮತ್ತು ಮಣ್ಣು ರಚನೆಯ ಪರಸ್ಪರ ಕ್ರಿಯೆಯ ತಂತ್ರಜ್ಞಾನ ನೈಪುಣ್ಯತೆಯನ್ನು ಹೊಂದಿರುವ ಆಕೆ ಭೂಮಿಯ ತಾಂತ್ರಿಕ ಸಂಶೋಧನೆಯ ಹಲವಾರು ವಿಷಯಗಳಲ್ಲಿ ನಿರ್ಣಾಯಕ ಸಲಹೆಗಾರರಾಗಿ ಹಲವಾರು ಅತಿ ದೊಡ್ಡ ಮೂಲಸೌಕರ್ಯ ಯೋಜನೆಗಳಲ್ಲಿ ಕಾರ್ಯನಿರ್ವಹಿಸಿದ್ದು ಅವುಗಳಲ್ಲಿ ಚೆನಾಬ್ ಸೇತುವೆಯೂ ಒಂದು.

ಅದರಲ್ಲೂ ಚೆನಾಬ್ ಸೇತುವೆ ಯೋಜನೆಯ ಭೂಮಿಯ ಮೌಲ್ಯಮಾಪನ ಇಳಿಜಾರಿನ ಸ್ಥಿರತೆ ಮತ್ತು ಬುನಾದಿಯ ವಿನ್ಯಾಸದಂತಹ ಅತ್ಯಂತ ಕ್ಲಿಷ್ಟ ವಿಷಯಗಳಲ್ಲಿ ಆಕೆಯ ಸಲಹೆ ಮತ್ತು ಕಾರ್ಯವೈಖರಿ ಅತ್ಯಂತ ನಿರ್ಣಾಯಕವಾಗಿತ್ತು. ಜಗತ್ತಿನಲ್ಲಿಯೇ ಅತ್ಯಂತ ಸಂಕೀರ್ಣವಾದ ಭೂವೈಜ್ಞಾನಿಕ ಸಂರಚನೆಗಳನ್ನು ಹೊಂದಿರುವ ಸೇತುವೆಯ ನಿರ್ಣಾಯಕ ಘಟಕಗಳನ್ನು ಜೋಡಿಸುವಲ್ಲಿ ಅತ್ಯವಶ್ಯಕವಾದ ನೈಪುಣ್ಯತೆ ಮಾಧವಿ ಲತಾ ಅವರಲ್ಲಿತ್ತು.

ಸದ್ದಿಲ್ಲದೆ ಕಾರ್ಯನಿರ್ವಹಿಸುವ ಪ್ರೊಫೆಸರ್ ಮಾಧವಿ ಲತಾ ಅವರು ಎಂದೂ ಪತ್ರಿಕೆಯ ಮುಖಪುಟಗಳಲ್ಲಿ ಕಾಣಿಸಿಕೊಂಡಿಲ್ಲ. ದಶಕಗಳ ಕಾಲ ಅತ್ಯಂತ ಶಾಂತವಾಗಿ ಭೂ ವೈಜ್ಞಾನಿಕ ತಂತ್ರಜ್ಞಾನದ ಆಳ,ಅಗಲ, ಮಿತಿಗಳನ್ನು ಅರಿತಿರುವ ಆಕೆ ಭೂಮಿ, ಕಡಿದಾದ ಕಲ್ಲು ಬಂಡೆಗಳು ಮತ್ತು ನಿಶ್ಚಿತವಲ್ಲದ ಭೂಪ್ರದೇಶಗಳ ಮೇಲೆ ಅತ್ಯಂತ ಸುರಕ್ಷಿತವಾದ ನಿರ್ಮಾಣಗಳನ್ನು ಮಾಡುವಲ್ಲಿ ನಿರತರಾದವರು. ಭಾರತೀಯ ರೈಲ್ವೆ ಪ್ರಾಧಿಕಾರವು ತನ್ನ ಮಹತ್ವಾಕಾಂಕ್ಷೆಯ ಯೋಜನೆಯಾದ ಉಧಮ್ ಪುರ, ಶ್ರೀನಗರ ಮತ್ತು ಬಾರಾಮುಲ್ಲಾ ರೈಲ್ ಲಿಂಕ (ಗಖಃಖಐ) ಯೋಜನೆಯನ್ನು ಆರಂಭಿಸಿದಾಗ ಫ್ರಾನ್ಸ್ ನ ಐಫೆಲ್ ಟವರ್ಗಿಂತಲೂ ಎತ್ತರವಾದ ಸುಮಾರು 359 ಮೀಟರ್ ಎತ್ತರದ ಸೇತುವೆಯನ್ನು ಚೆನಾಬ್ ನದಿಗೆ ಕಟ್ಟುವ ಯೋಜನೆಯನ್ನು ರೂಪಿಸಿತು. ಸಾಂಪ್ರದಾಯಿಕ ಇಂಜಿನಿಯರಿಂಗ್ ತಂತ್ರಜ್ಞಾನಕ್ಕಿಂತ ತುಸು ಹೆಚ್ಚಿನ ತಂತ್ರಜ್ಞಾನದ ಅರಿವನ್ನು ಹೊಂದಿರುವ ನಿಪುಣ ತಜ್ಞರ ಅವಶ್ಯಕತೆ ರೈಲ್ವೆ ಪ್ರಾಧಿಕಾರಕ್ಕೆ ಇತ್ತು. ಧೈರ್ಯ, ಜಾಣ್ಮೆ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಅಪರಿಮಿತ ನಂಬಿಕೆಯನ್ನು ಹೊಂದಿರುವ ದೃಢ ವ್ಯಕ್ತಿತ್ವದವರು ಬೇಕಾಗಿತ್ತು. ಆ ಕಾರಣದಿಂದಲೇ ಮಾಧವಿಲತಾ ಅವರನ್ನು ತಜ್ಞ ಸಮಿತಿಯ ಸದಸ್ಯರಾಗಿ ಕಾರ್ಯನಿರ್ವಹಿಸಲು ಆಹ್ವಾನಿಸಲಾಯಿತು.

ಜನರ ನಿರಂತರವಾದ ಪ್ರಶ್ನೆ ಅ ಭೂ ಪ್ರದೇಶ ಕುಸಿದರೆ ಏನು ಮಾಡುತ್ತೀರಿ? ಗಾಳಿಯ ಹೊಡೆತಕ್ಕೆ ಸೇತುವೆ ತಲೆಕೆಳಗಾದರೆ ಏನು ಮಾಡುತ್ತೀರಿ ಎಂದೆಲ್ಲ ಹೇಳುತ್ತಿದ್ದ ಜನರಿಗೆ ಆಕೆ ದಿಟ್ಟವಾಗಿ ಕೊಡುತ್ತಿದ್ದ ಉತ್ತರ ಒಂದೇ. ಈ ವಿಷಯದಲ್ಲಿ ನಾವು ಯಶಸ್ವಿಯಾಗುವುದಿಲ್ಲ ಎಂದು ನೀವೇಕೆ ಭಾವಿಸುತ್ತೀರಿ? ಒಂದು ವೇಳೆ ನಾವು ಯಶಸ್ವಿಯಾದರೆ ಎಂದು ತಮಗೆ ಕೇಳಿದವರನ್ನು ಮರು ಪ್ರಶ್ನಿಸುತ್ತಿದ್ದರು.

ಸೇತುವೆ ಉದ್ಘಾಟನೆಯಾಗಿ ಲೋಕಾರ್ಪಣೆಗೊಂಡ ನಂತರ ಮಾಧವಿ ಲತಾ ಅವರನ್ನು ಈ ವಿಷಯದ ಕುರಿತು ಪ್ರಶ್ನಿಸಿದಾಗ ತುಂಬಾ ಕೊರಕಲುಗಳು ಮತ್ತು ಅತ್ಯಂತ ಕಡಿಮೆ ಗುಣಮಟ್ಟದ ಬಂಡೆಗಲ್ಲುಗಳು ಅಲ್ಲಿದ್ದು ಬಂಡೆಗಲ್ಲುಗಳ ಒಳಗೆ ಇರಬಹುದಾದ ಕುಳಿಗಳು ಹೀಗೆ ಹತ್ತು ಹಲವು ವಿಷಯಗಳ ಕುರಿತು ತಾಂತ್ರಿಕ ಅರಿವನ್ನು ಹೊಂದಿದ್ದು ಹಲವಾರು ಬಂಡೆಗಲ್ಲುಗಳ ನಡುವಿರುವ ಕುಳಿಗಳನ್ನು ದುರಸ್ತಿ ಮಾಡದೆ ಹೋದರೆ ಭೂಕುಸಿತ ಉಂಟಾಗುವ ಸಂಭವ ಇರುತ್ತಿತ್ತು ಆದ್ದರಿಂದ ಎಲ್ಲ ಕುಳಿಗಳನ್ನು ಗ್ರೌಟಿಂಗ ವ್ಯವಸ್ಥೆಯ ಮೂಲಕ ಸಿಮೆಂಟ್ ಅನ್ನು ತುಂಬಿ ಗಟ್ಟಿಗೊಳಿಸಲಾಯಿತು. ಬಂಡೆಗಳು ಬೀಳದಂತೆ ತಡೆಯಲು ಅತ್ಯಂತ ಬಲಿಷ್ಠವಾದ ಉಕ್ಕಿನ ಲಂಗರಗಳನ್ನು ಬಳಸಲಾಗಿದೆ. ಸೇತುವೆಯ ಸಾಮರ್ಥ್ಯವನ್ನು ಹೆಚ್ಚಿಸಲು ಪದೇಪದೇ ಯೋಜನೆಗಳನ್ನು ಬದಲಾಯಿಸಬೇಕಾದ ಕಾರಣ ಮುಂದುವರೆಯುವ ವಿನ್ಯಾಸ ಮಾದರಿಯನ್ನು ಅನುಸರಿಸಿದ ವಿಷಯವನ್ನು ಅವರು ವಿವರಿಸಿದರು.

ಮಾಧವಿ ಲತಾ ಮತ್ತು ಅವರ ತಂಡವು ತಿಂಗಳಾನುಗಟ್ಟಲೆ ಅತ್ಯಂತ ವ್ಯತಿರಿಕ್ತ ಪರಿಸ್ಥಿತಿಗಳಲ್ಲಿಯೂ ಲಿಂಗ ವ್ಯತ್ಯಾಸವಿಲ್ಲವೇ ಕಾರ್ಯ ನಿರ್ವಹಿಸಿದ ಪರಿಣಾಮವಾಗಿ ಇಂದು ಇಡೀ ಜಗತ್ತಿನಲ್ಲಿ ಅತಿ ದೊಡ್ಡ ಕಮಾನು ಸೇತುವೆಯೊಂದು ಭಾರತದ ಇಂಜಿನಿಯರಿಂಗ್ ತಂತ್ರಜ್ಞಾನದ ಹೆಮ್ಮೆಯನ್ನು ಜಗತ್ತಿಗೆ ಸಾರುತ್ತ ಭವ್ಯವಾಗಿ ತಲೆ ಎತ್ತಿ ನಿಂತಿದೆ.

ಕಮಾನು ಸೇತುವೆಗೆ 476 ಮೀಟರ್ ಆಳತೆಯು ಭೂಮಿಯ ಸ್ಥಿರತೆಗೆ ಸರಿ ಸಮನಾಗಿ ನೂರಾರು ವರ್ಷ ಯಾವುದೇ ರೀತಿಯ ಗಾಳಿ ಮಳೆ ಬಿರುಗಾಳಿ ಭೂಕಂಪಗಳಿಗೆ ಬೆದರದಂತಹ ತಾಳಿಕೆ ಬರುವಂತಹ ಭದ್ರವಾದ ಕಮಾನು ಸೇತುವೆಯ ನಿರ್ಮಾಣ ಕಾರ್ಯಕ್ಕೆ ಒತ್ತು ನೀಡಿದ್ದು ಪ್ರಸ್ತುತ ಚೆನಾಬ್ ಸೇತುವೆಯು ಅತ್ಯದ್ಭುತವಾದ ಬುನಾದಿಯನ್ನು ಹೊಂದಿದ್ದು ಇದರ ಮೇಲಿರುವ ಸೇತುವೆ ಭವ್ಯವಾಗಿ ತಲೆ ಎತ್ತಿ ನಿಲ್ಲಲು ಕಾರಣವಾಗಿದ್ದು ಈ ಭೂಮಿಯ ಸ್ಥಿತಿಗತಿಗಳನ್ನು ಅಧ್ಯಯನ ಮಾಡಿ, ಭೂಮಿಯ ಪಿಸು ಮಾತನ್ನು ಕೇಳಿ ಪ್ರತಿಯೊಂದು ತಿರುಪನ್ನು ಸರಿಯಾಗಿ ಜೋಡಿಸಿದ ತಾಂತ್ರಿಕ ನಿಪುಣರು.

ಅಂತಿಮವಾಗಿ ಚೆನಾಬ್ ನದಿಯ ಕಮಾನು ಸೇತುವೆ ತಯಾರಾಗಿದ್ದು ಇನ್ನೇನು ರೈಲುಗಳು ಓಡಾಡುತ್ತವೆ ಮತ್ತು ಜನರ ಜೀವನವನ್ನು ಜೋಡಿಸುತ್ತದೆ. ಮಾಧವಿ ಲತಾ ಎಂಬ ಇಂಜಿನಿಯರಿಂಗ್ ತಂತ್ರಜ್ಞಾನ ಪರಿಣತ ವ್ಯಕ್ತಿ ಸೇತುವೆಗಳು ಕೇವಲ ಉಕ್ಕು ಮತ್ತು ಕಬ್ಬಿಣದಂತಹ ವಸ್ತುಗಳಿಂದ ಮಾತ್ರ ನಿರ್ಮಿಸಲ್ಪಡುವುದಿಲ್ಲ ಬದಲಾಗಿ ತೀವ್ರ ದೂರದೃಷ್ಟಿ, ದೃಢ ನಿಶ್ಚಯ ಮತ್ತು ಅದಮ್ಯ ಮಾನವೀಯ ಸ್ಫೂರ್ತಿಯಿಂದ ನಿರ್ಮಿಸಲ್ಪಡುತ್ತವೆ.

ಭಾರತ ಮಾತೆಯ ಮಡಿಲಿನ ಅನರ್ಘ್ಯ ರತ್ನ ಮಾಧವಿ ಲತಾ ಮತ್ತು ತಂಡಕ್ಕೆ ಶುಭಾಶಯಗಳು.

**ಲೇಖಕರು**

**– ವೀಣಾ ಹೇಮಂತ್ ಗೌಡ ಪಾಟೀಲ್**

**ಮುಂಡರಗಿ ಗದಗ್**

# ಪತ್ನಿಯಿಂದಲೇ ಉದ್ಯಮಿ ರಘುವಂಶಿ ಹತ್ಯೆ

**ಇಂಧೋರ್, ಜೂ.9–** ಹನಿಮೂನ್‌ಗಾಗಿ ಮೇಘಾಲಯಕ್ಕೆ ತೆರಳಿದ್ದ ಮಧ್ಯಪ್ರದೇಶದ ಇಂಧೋರ್ ಮೂಲದ ನವ ವಿವಾಹಿತ ರಾಜಾ ರಘುವಂಶಿ ಕೊಲೆ ಪ್ರಕರಣಕ್ಕೆ ದೊಡ್ಡ ತಿರುವು ಸಿಕ್ಕಿದ್ದು ಪತ್ನಿಯೇ ಬಾಡಿಗೆ ಕೊಲೆಗಾರರನ್ನು ಕರೆಸಿ ಹತ್ಯೆ ಮಾಡಿದ ಸಂಗತಿ ಬೆಳಕಿಗೆ ಬಂದಿದೆ.

ಈ ಸಂಬಂಧ ಪತ್ನಿ ಸೋನಮ್ ಸೂರ್ಯವಂಶಿ ಸೇರಿದಂತೆ ನಾಲ್ಕು ಮಂದಿಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಲಾಗಿದ್ದು, ತನಿಖೆಯ ವೇಳೆ ಬಾಡಿಗೆ ಕೊಲೆಗಾರರನ್ನು ಕರೆಸಿ ಹತ್ಯೆ ಮಾಡಿರುವುದಾಗಿ ಆಕೆ ಒಪ್ಪಿಕೊಂಡಿದ್ದಾಳೆ, ಹನಿಮೂನ್‌ಗೆ ತೆರಳಿದ್ದ ವೇಳೆ ನವ ವಿವಾಹಿತ ಪತಿಯನ್ನು ಹತ್ಯೆ ಮಾಡಿದ ಕಾರಣ ಪತ್ತೆ ಮಾಡುವ ಕೆಲಸದಲ್ಲಿ ಪೊಲೀಸರು ನಿರತರಾಗಿದ್ದಾರೆ.

ಮೇಘಾಲಯದ ಪೂರ್ವ ಖಾಸಿ ಬೆಟ್ಟಗಳ ಲ್ಲಿರುವ ವೈಸಾವ್ಡಾಂಗ್ ಜಲಪಾತದ ಪಾರ್ಕಿಂಗ್ ಸ್ಥಳದ ಕೆಳಗಿನ ಕಮರಿಯಲ್ಲಿ ಪತಿಯ ಶವ ಪತ್ತೆಯಾದ ನಂತರ ಪತ್ನಿ ಸೋನಮ್ ರಘುವಂಶಿ ನಾಪತ್ತೆಯಾಗಿದ್ದರು. ಆಕೆಯ ಪತ್ತೆಗೆ ಮೇಘಾಲಯ ಪೊಲೀಸರು ಬೆನ್ನು ಹತ್ತಿದ್ದರು. ಅವರಿಗೆ ಸಿಕ್ಕ ಮಾಹಿತಿ ಆಧರಿಸಿ ತಲೆ ಮರೆಸಿಕೊಂಡಿದ್ದ ಸೋನಮ್ ಸೂರ್ಯವಂಶಿಯನ್ನು ಬಂಧಿಸಿದ್ದು ನ್ಯಾಯಾಲಯಕ್ಕೆ ಹಾಜರು ಪಡಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ.

ಜೂನ್ 2 ರಂದು ಪೂರ್ವ ಖಾಸಿ ಬೆಟ್ಟಗಳಲ್ಲಿರುವ ವೈಸಾವ್ಡಾಂಗ್ ಜಲಪಾತದ ಪಾರ್ಕಿಂಗ್ ಸ್ಥಳದ ಕೆಳಗಿನ ಕಮರಿಯಲ್ಲಿ ಪತಿಯ ಶವ ಪತ್ತೆಯಾದ ನಂತರ ಸೋನಮ್ ನಾಪತ್ತೆಯಾಗಿದ್ದರು. ಉತ್ತರ ಪ್ರದೇಶದ ಘಾಜಿಪುರ ಜಿಲ್ಲೆಯಿಂದ ಸೋನಮ್ ನನ್ನು ಪತ್ತೆ ಮಾಡಿ



ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಡಾಲ್ಟನ್ ಪಿ ಮರಕ್ ಮಾತನಾಡಿ "ಸೋನಮ್ ಒತ್ತಡದಲ್ಲಿ ಶರಣಾಗಿದ್ದಾರೆ, ಇದರಿಂದಾಗಿ ಪ್ರಕರಣದಲ್ಲಿ ಒಟ್ಟು ಬಂಧನ ಸಂಖ್ಯೆ ನಾಲ್ಕಕ್ಕೆ ಏರುಕೆಯಾಗಿದೆ, ಒಬ್ಬ ಆರೋಪಿ ಇನ್ನೂ ನಾಪತ್ತೆಯಾಗಿದ್ದಾನೆ. ಸೋನಮ್‌ರನ್ನು ನ್ಯಾಯಾಲಯದ ವಿಚಾರಣೆಗಾಗಿ ಮೇಘಾಲಯಕ್ಕೆ ಕರೆತರಲಾಗುವುದು" ಎಂದು ಹೇಳಿದ್ದಾರೆ.

ಪೊಲೀಸರು ಇಲ್ಲಿಯವರೆಗೆ ಸೋನಮ್ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ. ಇತರ ಮೂವರನ್ನು ವಿವಿಧ ರಾಜ್ಯಗಳಿಂದ ಬಂಧಿಸಲಾಗಿದೆ; ಒಬ್ಬರು ಉತ್ತರ ಪ್ರದೇಶದಲ್ಲಿ ಮತ್ತು ಇಬ್ಬರು ಮಧ್ಯಪ್ರದೇಶದ ಇಂದೋರ್‌ನಲ್ಲಿ ಬಂಧಿಸಿ ವಿಚಾರಣೆಗೆ ಒಳಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಪತ್ನಿ ಸೋನಮ್ ಬಾಡಿಗೆ ಕೊಲೆಗಾರರನ್ನು ನೇಮಿಸಿಕೊಳ್ಳುವ ಮೂಲಕ ಪತಿಯ ಹತ್ಯೆ ಮಾಡಿದ ಆರೋಪ ಹೊತ್ತಿದ್ದಾರೆ. ಈ ಪ್ರಕರಣವನ್ನು ವಿಶೇಷ ತನಿಖಾ ತಂಡಕ್ಕೆ ವಹಿಸಲಾಗಿದ್ದು ಶಂಕಿತರನ್ನು ಪತ್ತೆಹಚ್ಚಲು ಮತ್ತು ಬಂಧಿಸಲು ಬಹು ರಾಜ್ಯಗಳಲ್ಲಿ ಏಕಕಾಲದಲ್ಲಿ ಕಾರ್ಯಾಚರಣೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸೋನಮ್ ಅವರ ಕುಟುಂಬ ಕೊಲೆ ಆರೋಪಗಳನ್ನು ಬಲವಾಗಿ ನಿರಾಕರಿಸಿದೆ. ಅವರ ತಂದೆ ದೇವಿ ಸಿಂಗ್, ತಮ್ಮ ಮಗಳು ನಿರಪರಾಧಿ ಎಂದು ಸಮರ್ಥಿಸಿಕೊಂಡಿದ್ದಾರೆ ಮತ್ತು ಕೇಂದ್ರ ತನಿಖಾ ದಳದಿಂದ ಸ್ವತಂತ್ರ ತನಿಖೆಗೆ ಒತ್ತಾಯಿಸಿದ್ದಾರೆ.

ಎರಡೂ ಕುಟುಂಬಗಳ ಒಪ್ಪಿಗೆಯೊಂದಿಗೆ ಅವರು ಮದುವೆ ಮಾಡಲಾಗಿತ್ತು. ಮೇಘಾಲಯ ಸರ್ಕಾರ ಮೊದಲಿನಿಂದಲೂ ಸುಳ್ಳು ಹೇಳುತ್ತಲೇ ಬಂದಿದೆ. ಮಗಳು ನಿನ್ನೆ ರಾತ್ರಿ ಘಾಜಿಪುರದ ಧಾಬಾಗೆ ಬಂದ ವೇಳೆ ಆಕೆಯನ್ನು ಬಂಧಿಸಲಾಗಿದೆ ಎಂದಿದ್ದಾರೆ.

# ಬಿಜೆಪಿ– ಜೆಡಿಎಸ್‌ಗೆ ಯೂಟರ್ನ್ ಹೊಸದೇನಲ್ಲ: ಡಿ.ಕೆ.ಸುರೇಶ್

**ಬೆಂಗಳೂರು, ಜೂ. 9–** ಆರ್‌ಸಿಬಿ ಮೆರವಣಿಗೆಗೆ ಒತ್ತಾಯ ಮಾಡಿ ಈಗ ಬಿಜೆಪಿ–ಜೆಡಿಎಸ್ ಯೂಟರ್ನ್ ಹೊಡೆಯುತ್ತಿದ್ದಾರೆ. ಇದು ಇವರಿಗೆ ಹೊಸದೇನಲ್ಲ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಸಿಬಿ ಕಪ್ ಗೆದ್ದ ನಂತರ ಎರಡು ಪಕ್ಷಗಳು ಮೆರವಣಿಗೆಗೆ ಒತ್ತಾಯ ಮಾಡಿ ಕ್ರೀಡಾಭಿಮಾನಿಗಳಿಗೆ ಅವಮಾನ ಮಾಡುತ್ತಿದ್ದೀರಿ, ನಿಮಗೆ ಮೆರವಣಿಗೆ ಮಾಡಲು ಆಗುವುದಿಲ್ಲವೇ ಎಂದು ಪ್ರಶ್ನೆ ಮಾಡಿದ್ದರು. ಈಗ ಯೂಟರ್ನ್ ಹೊಡೆಯುತ್ತಿದ್ದಾರೆ ಎಂದು ಹರಿಹಾಯ್ದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಬಿಜೆಪಿಯವರು ಯೂಟರ್ನ್ ಹೊಡೆಯುತ್ತಲೇ ಇದ್ದಾರೆ ಎಂದು ಟೀಕಿಸಿದರು.

ಬಿಜೆಪಿ ಆಡಳಿತದಲ್ಲಿರುವ ರಾಜ್ಯಗಳಲ್ಲೂ ಘೋರ ದುರಂತಗಳು ಆಗಿವೆ. ಬೇಕಾದರೆ ಪಟ್ಟಿ ನೀಡುತ್ತೇವೆ. ನೈತಿಕತೆ ಇದ್ದರೆ ಬಿಜೆಪಿ ನಾಯಕರು ಮೊದಲು ರಾಜೀನಾಮೆ ನೀಡಲಿ ಎಂದು ಅವರು ಹೇಳಿದರು.

ಮುಂಬೈ ದಾಳಿಯಾದಾಗ ಪ್ರಧಾನಿ ಆಗಿದ್ದ ಡಾ. ಮನಮೋಹನ್‌ಸಿಂಗ್ ಅವರು ರಾಜೀನಾಮೆ ನೀಡಿದ್ದರಾ ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಈ ಘಟನೆ ನಂತರ ಮಹಾರಾಷ್ಟ್ರ ಮುಖ್ಯಮಂತ್ರಿಯಾಗಿದ್ದ ವಿಲಾಸ್‌ರಾವ್ ದೇಶಮುಖ್ ಅವರು ರಾಜೀನಾಮೆ ನೀಡಿದ್ದರು. ಇದನ್ನು ಕುಮಾರಸ್ವಾಮಿ ಮರೆತಿದ್ದಾರೆ ಎಂದು ವ್ಯಂಗ್ಯವಾಡಿದರು.

ಕೇಂದ್ರ ಸಚಿವ ಕುಮಾರಸ್ವಾಮಿಯವರಿಗೆ ಡಿ.ಕೆ.



ಶಿವಕುಮಾರ್‌ರವರನ್ನು ನೆನಪಿಸಿಕೊಳ್ಳದೇ ಇದ್ದರೆ ಊಟ, ನಿದ್ದೆ ಏನೂ ಆಗುವುದಿಲ್ಲ. ಮೊದಲು ಆರೋಗ್ಯದ ಕಡೆ ಗಮನ ಕೊಡಲಿ, ರಾಷ್ಟ್ರದ ಜನರ ಸೇವೆ ಮಾಡಲಿ ಎಂದು ಹೇಳಿದರು.

ನನ್ನ ಆರೋಗ್ಯವನ್ನು ದೇವರು ನೋಡಿಕೊಳ್ಳುತ್ತಾನೆ ಎನ್ನುವ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಎಲ್ಲರ ಆರೋಗ್ಯವನ್ನು ದೇವರೇ ನೋಡಿಕೊಳ್ಳುವುದು. ಅವರು ಖುಷಿಯಾಗಿದ್ದರೆ ನಮಗೆ ಸಂತೋಷ ಎಂದರು.

ಸುಹಾಸ್ ಶೆಟ್ಟಿ ಕೊಲೆ ಪ್ರಕರಣವನ್ನು ಎನ್‌ಐಎಗೆ ವಹಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ತನಿಖೆ ನಡೆಸಲು ನಮ್ಮ ಪೊಲೀಸರು ಸಮರ್ಥರಿದ್ದಾರೆ. ಈ ಹಿಂದೆ ಸಿದ್ದರಾಮಯ್ಯನವರ ಸರ್ಕಾರ ಇದ್ದಾಗ ಹಲವು ಪ್ರಕರಣಗಳನ್ನು ಸಿಬಿಐಗೆ ನೀಡಲಾಗಿತ್ತು. ಇದರ ಫಲಿತಾಂಶ ಏನಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಕರಾವಳಿ ಭಾಗದಲ್ಲಿ ವಿಷ ಬೀಜ ಬಿತ್ತುವ ಕೆಲಸವನ್ನು ಬಿಜೆಪಿ ಮಾಡುತ್ತಿದೆ. ಇದು ಸರಿಯಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೈಕಮಾಂಡ್ ಬುಲಾವ್ ಮೇರೆಗೆ ದೆಹಲಿಗೆ ತೆರಳಿದ್ದಾರೆ ಎಂಬ ವರದಿಗಳು ಸತ್ಯಕ್ಕೆ ದೂರವಾದದ್ದು. ಬೆಂಗಳೂರಿನ ಕಸ ವಿಲೇವಾರಿಗೆ ಸಂಬಂಧಿಸಿದಂತೆ ಡಿ.ಕೆ. ಶಿವಕುಮಾರ್ ರವರು ದೆಹಲಿಯಲ್ಲಿರುವ ಹೊಸ ತಂತ್ರಜ್ಞಾನ ವೀಕ್ಷಿಸಲು ಅಧಿಕಾರಿಗಳ ಜತೆ ಅಲ್ಲಿಗೆ ತೆರಳಿದ್ದಾರೆ ಅಷ್ಟೇ. ಹೈಕಮಾಂಡ್ ಬುಲಾವ್ ಮೇರೆಗೆ ದೆಹಲಿಗೆ ಹೋಗಿದ್ದಾರೆ ಎಂಬುದು ಸುಳ್ಳು. ಶಿವಕುಮಾರ್ ರವರು ದೆಹಲಿಗೆ ಹೋದಾಗ ಹೈಕಮಾಂಡ್ ಭೇಟಿ ಮಾಡುತ್ತಾರೆ. ಅದು ಸಾಮಾನ್ಯ ವಿಚಾರ ಎಂದರು.

ನಾಮ ನಿರ್ದೇಶಿತ ಸದಸ್ಯರ ಪಟ್ಟಿಯನ್ನು ಎಐಸಿಸಿ ತಡೆ ಹಿಡಿದಿರುವ ಬಗ್ಗೆ ತಮಗೆ ಮಾಹಿತಿ ಇಲ್ಲ ಎಂದು ಅವರು ಹೇಳಿದರು.

ತುಮಕೂರನ್ನು ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಸೇರಿಸಬೇಕು ಎಂಬ ಗೃಹ ಸಚಿವ ಡಾ. ಜಿ. ಪರಮೇಶ್ವರ್‌ರವರ ಹೇಳಿಕೆಯನ್ನು ನಾನು ಸ್ವಾಗತ ಮಾಡುತ್ತೇನೆ. ಆದರೆ ಈ ಕುರಿತು ಅಂತಿಮವಾಗಿ ಸರ್ಕಾರ ತೀರ್ಮಾನ ಮಾಡುತ್ತದೆ ಎಂದು ಅವರು ಹೇಳಿದರು.

# ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರು,ಜೂ.9–** ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಹಾಗೂ ಈ ಯೋಜನೆಗಳಡಿ ಸಹಾಯಧನ, ಸಾಲ–ಸೌಲಭ್ಯ ಪಡೆಯಲು ಇಚ್ಛಿಸುವವರು ಕಡ್ಡಾಯ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ನಲ್ಲಿ  ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 02.07.2025 ಇದೆ. ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ.

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು–ಶೈಕ್ಷಣಿಕ ನೇರಸಾಲ ಯೋಜನೆ (ಹೊಸದು), ಗಂಗಾ ಕಲ್ಯಾಣ ಯೋಜನೆ (ಈ ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಹೊಂದಿರಬೇಕು), ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ–ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.15.00 ಲಕ್ಷಗಳ ಮಿತಿಯಲ್ಲಿರಬೇಕು.

ಅರ್ಜಿ ಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು: ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು., ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸರ್ಕಾರದ ಆದೇಶ ಸಂಖ್ಯೆ:ಹಿಂವಕ/155/ಬಿಸಿಎ/2020, ದಿನಾಂಕ:28/09/2020ರನ್ವಯ ಕಾಡುಗೊಲ್ಲ ಜಾತಿಗೆ ಸೇರಿರಬೇಕು., ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.,  ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು., ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು., ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು., ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು. ವಾರ್ಷಿಕ ವರಮಾನ ರೂ.3.50 ಲಕ್ಷಗಳು., ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು., ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು., ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000 ಮತ್ತು ನಗರ ಪ್ರದೇಶದವರಿಗೆ  ರೂ. 1,20,000ಗಳ ಮಿತಿಯೊಳಗಿರಬೇಕು., ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ಮೀಸಲಾತಿ ಇರಿಸಿದೆ.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ

ತಾಳೆಯಾಗಬೇಕು (ಶ್ರೀ /ಶ್ರೀಮತಿ /ಕುಮಾರಿ ಮುಂತಾದ ಮಾಹಿತಿಗಳು) ಬೆಂಗಳೂರು–ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080–22374848/7899899039ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ  ನಂ: 1–1–158, ಉದಯನಗರ, ಕರ್ನಾಟಕ ಗ್ರಾಮೀಣ ಬ್ಯಾಂಕ ಹಿಂಭಾಗ, ಉಮಾ ಹೋಟೆಲ್ ಹತ್ತಿರ, ಸ್ಟೇಶನ ರೋಡ್, ರಾಯಚೂರು (ದೂರವಾಣಿ ಸಂ: 08532–250440) ಪೂರ್ವಾಹ್ನ 10.00ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ.

ವಿಶೇಷ ಸೂಚನೆ: 2023–24 ಹಾಗೂ 2024–25ನೇ ಸಾಲಿನಲ್ಲಿ ಯೋಜನೆಗೆ ಅರ್ಜಿಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

# ಚಿಕ್ಕಪ್ಪನಿಂದ ಅಣ್ಣನ ಮಗನ ಹತ್ಯೆ

**ಚಡಚಣ,ಜೂ.9–** ಅಣ್ಣನ ಮಗನನ್ನು ಚಿಕ್ಕಪ್ಪನೇ ಕೊಡಲಿಯಿಂದ ಕುತ್ತಿಗೆ ಕಡಿದು ಬರ್ಬರ ಹತ್ಯೆ ಮಾಡಿದ ಘಟನೆ ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಶಿರಾಡೋಣ ಗ್ರಾಮದಲ್ಲಿ ನಡೆದಿದೆ. ಬೀರಪ್ಪ ಸೀರೆಪ್ಪ ಸಲಗರ ಊರ್ಪ್ ಸೊಲಂಕರ ಹತ್ಯೆಯಾದ ವ್ಯಕ್ತಿ.ಹತ್ಯೆಯಾದ ವ್ಯಕ್ತಿಯ ಚಿಕ್ಕಪ್ಪ ಅಮಸಿದ್ದ ಸಿದ್ದರಾವ ಸಲಗರ ಊರ್ಫ್ ಸೊಲಂಕರ ಎಂಬಾತ ಕೊಲೆ ಮಾಡಿದ ವ್ಯಕ್ತಿ ಎಂದು ಪೊಲೀಸರು ತಿಳಿಸಿದ್ದಾರೆ.ಜಮೀನಿಗಾಗಿ ನಡೆದ ಕೌಟುಂಬಿಕ ಜಗಳವೇ ಕೊಲೆಗೆ ಕಾರಣ ಎಂದು ತಿಳಿದು ಬಂದಿದೆ.ಸ್ಥಳಕ್ಕೆ ಚಡಚಣ ಪೊಲೀಸರು ಭೇಟಿ ಪರಿಶೀಲನೆ ನಡೆಸಿದ್ದಾರೆ.

# ಲಾರ್ವ ಮುಕ್ತ ಶಾಲೆ ಅಭಿಯಾನಕ್ಕೆ ಶ್ರಮವಹಿಸಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.9–** ಡೆಂಗೆ ಸೊಳ್ಳೆ ಉತ್ಪತ್ತಿಗೆ ಕಾರಣವಾಗುವ ಲಾರ್ವ ಬೆಳವಣಿಗೆಯನ್ನು ತಡೆಯಲು ಶಾಲೆಯ ಪರಿಸರದಲ್ಲಿ ನೀರು ನಿಲ್ಲದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದು ಕೊಳ್ಳುವಂತೆ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಸರೋಜ ಕೆ ಅವರು ಹೇಳಿದರು.

ಸೋಮವಾರ ನಗರದ ಜಾಹೀರಾಬಾದಿನ ಕನಿಕಾ ಪರಮೇಶ್ವರಿ ಪ್ರೌಢಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಲಾರ್ವ ಮುಕ್ತ ಶಾಲೆ ಅಭಿಯಾನ ಕುರಿತು ಅವರು ಮಾತನಾಡಿದರು.

ಸಾಮಾನ್ಯವಾಗಿ ಹಗಲಿನಲ್ಲಿ ಕಚ್ಚುವ ಈಡೀಸ್ ಸೊಳ್ಳೆಯಿಂದ ಡೆಂಗೆ ರೋಗ ಉಲ್ಬಣವಾಗಲಿದೆ. ಎಲ್ಲೆಡೆ ವ್ಯಾಪಕವಾಗಿ ಹರಡುತ್ತಿರುವ ಡೆಂಗೆ ಪರಿಣಾಮಕಾರಿಯಾಗಿ ತಡೆಗಟ್ಟಲು ಶಾಲಾ ಸುತ್ತಲು 2–3 ದಿನಗಳ ಕಾಲ ನೀರು ಸಂಗ್ರಹವಾಗದಂತೆ ಎಚ್ಚರಿಕೆ ವಹಿಸಬೇಕು. ಸಂಗ್ರಹವಾಗುವ ನೀರನ್ನು ಸೂಕ್ತವಾಗಿ ವಿಲೇವಾರಿ ಮಾಡಬೇಕು. ಈ ನಿಟ್ಟಿನಲ್ಲಿ ಈಗಾಗಲೇ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿ, ನಗರ ಪ್ರದೇಶಗಳಲ್ಲಿ ಡೆಂಗೆ ಕಾಯಿಲೆ ಬಗ್ಗೆ ಶಾಲಾ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಪ್ರಸ್ತುತ ಮಳೆಗಾಲ ಆರಂಭವಾಗಿದ್ದು, ಶಾಲಾ ಆವರಣದಲ್ಲಿ ನೀರು ಶೇಖರಣೆಯಾಗುವ ತೊಟ್ಟಿಗಳು, ಡ್ರಮ್, ಬ್ಯಾರೆಲ್, ಒಡೆದ ಬಾಟಲಿ, ಅನುಪಯುಕ್ತ ಟೈರುಗಳು, ಎಳೆನೀರಿನ ಚಿಪ್ಪುಗಳು, ಒಡೆದ ಬಾಟಲಿಗಳಲ್ಲಿ ನೀರು ಸಂಗ್ರಹವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿ ಡೆಂಗೆ ನಿಯಂತ್ರಣಕ್ಕೆ ಎಲ್ಲರೂ ಸಹಕರಿಸಬೇಕು ಎಂದರು.

ಮಕ್ಕಳು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು. ಸ್ವಯಂ ರಕ್ಷಣಾ ವಿಧಾನ ಅನುಸರಿಸಬೇಕು. ಮೈ ತುಂಬಾ ಬಟ್ಟೆ ಧರಿಸಬೇಕು. ಸೊಳ್ಳೆ ಪರದೆ ಉಪಯೋಗಿಸಬೇಕು. ಕಿಡಕಿಗಳಿಗೆ ಜಾಲರಿ ಅಳವಡಿಸಬೇಕು. ಗುಡ್ ನೈಟ್, ಸೊಳ್ಳೆ ಹೊಡ 'ಯುವ ಬ್ಯಾಟ್ ಉಪಯೋಗಿಸಬೇಕು. ಮನೆಯಲ್ಲಿರುವ ನೀರಿನ ಪರಿಕರಗಳನ್ನು ವಾರಕ್ಕೊಮ್ಮೆ ತೊಳೆದು ಒಣಗಿಸಬೇಕು.

ಯಾವುದೇ ಜ್ವರ ಇರಲಿ ಹತ್ತಿರದ ಆಸ್ಪತ್ರೆಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದರು. ಡೆಂಗೆ ಜ್ವರ ಕುರಿತು ಒಬ್ಬರಿಗೊಬ್ಬರು ಮಾಹಿತಿ ನೀಡಿದಲ್ಲಿ ಡೆಂಗೆ ಜ್ವರ ನಿಯಂತ್ರಿಸಬಹುದು ಎಂದು ಅವರು ಸಲಹೆ ಮಾಡಿದರು.

**ಜವಾಬ್ದಾರಿ ಹಂಚಿಕೆ:** ಆರೋಗ್ಯ ಇಲಾಖೆ ಆದೇಶದಂತೆ ದಿನಾಲೂ ಶಾಲೆ ಚಾವಣಿ, ಕಂಪೌಂಡ್ ಸುತ್ತಲಿನ ಪ್ರದೇಶದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಲು ಶಾಲೆಯಲ್ಲಿ ವಿಜ್ಞಾನ ಹಾಗೂ ದೈಹಿಕ ಶಿಕ್ಷಕರಿಗೆ ನೋಡಲ್ ಅಧಿಕಾರಿಗಳಾಗಿ ಜವಬ್ದಾರಿ ನೀಡಲಾಯಿತು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಮಲ್ಲಪ್ಪ, ಶಿಕ್ಷಕಿ ಕೊಂಡ ಸರಸ್ವತಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಪದ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಶೃತಿ ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಗೂ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

# ಬ್ರೈನ್ ಟ್ಯೂಮರ್ ನಿರ್ಲಕ್ಷ್ಯ ಬೇಡ, ಮುಂಜಾಗ್ರತೆ ಅಗತ್ಯ



**ಕಲಬುರಗಿ,ಜೂ.9–**ಮಾನವನ ದೇಹದ ಪ್ರಮುಖ ಅಂಗವಾದ ಮೆದುಳು ಎಲ್ಲಾ ಅಂಗಗಳನ್ನು ನಿಯಂತ್ರಿಸುವ ಮೂಲಕ ದೇಹ ಮತ್ತು ಮನಸ್ಸಿನ ನಡುವೆ ಸಮತೋಲನ ಕಾಪಾಡುತ್ತದೆ. ಆಧುನಿಕ ಒತ್ತಡದ ಬದುಕು, ಅನಾರೋಗ್ಯಕರ ಜೀವನ ಶೈಲಿ, ಅಪಘಾತ, ವಿಶ್ರಾಂತಿ ಇಲ್ಲದಿರುವುದು, ರಾಸಾಯನಿಕಗಳ ಸೇವನೆ, ಅತಿಯಾದ ಮೊಬೈಲ್ ಬಳಕೆ ಸೇರಿದಂತೆ ಮತ್ತಿತರ ಕಾರಣಗಳಿಂದ ಬ್ರೈನ್ ಟ್ಯೂಮರ್ ಉಂಟಾಗುತ್ತದೆ. ಇದರ ಬಗ್ಗೆ ನಿರ್ಲಕ್ಷ್ಯ ವಹಿಸದೆ, ತಿಳಿದುಕ 'ಒಂಡು, ಮುಂಜಾಗ್ರತೆ ವಹಿಸಬೇಕಾದದ್ದು ಅವಶ್ಯಕವಾಗಿವೆ ಎಂದು ಕುಟುಂಬ ವೈದ್ಯ ಡಾ.ಮಂಜುನಾಥ ಪವಾಡಶೆಟ್ಟಿ ಸಲಹೆ ನೀಡಿದರು.

ನಗರದ ಆಳಂದ ಚೆಕ್‌ಪೋಸ್ಟ್ ಸಮೀಪವಿರುವ 'ಬಸವೇಶ್ವರ ಕ್ಲಿನಿಕ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ 'ವಿಶ್ವ ಬ್ರೈನ್ ಟ್ಯೂಮರ್ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ತೀವ್ರ ತಲೆನೋವು, ಕಣ್ಣು ಮಂಜಾಗಿ ಕಾಣಿಸುವುದು, ಪದೇ ಪದೆ ವಾಂತಿಯಾಗುವುದು, ಮೂರ್ಛೆ ಹೋಗುವುದು, ಮಾನಸಿಕ ಒತ್ತಡ ಹೆಚಾಗುವುದು, ಕೈ ಅಥವಾ ಕಾಲಿನ ಭಾಗವದಲ್ಲಿ ಸಂವೇದನೆ ಕಳೆದುಕೊಳ್ಳುವುದು, ಶ್ರವಣ ಮತ್ತು ದೃಷ್ಟಿ ಸಮಸ್ಯೆಗಳು ಬ್ರೈನ್ ಟ್ಯೂಮರ್‌ನ ಲಕ್ಷಣಗಳಾಗಿದ್ದು, ಇವುಗಳು ಕಂಡುಬಂದರೆ ತಪಾಸಣೆ ಮಾಡಿಕೊಳ್ಳುವುದು ಉತ್ತಮವಾಗಿದೆ. ಮೆದುಳಿಗೆ ಸಂಬಂಧಿಸಿದಂತೆ ನಿರ್ಲಕ್ಷ್ಯ ವಹಿಸುವುದು ಬೇಡ. ಒತ್ತಡ ರಹಿತ ಜೀವನ ಶೈಲಿ, ಧನಾತ್ಮಕ ಚಿಂತನೆ, ಸೂಕ್ತ ಕಾಲಕ್ಕೆ ಆಹಾರ, ವಿಶ್ರಾಂತಿ ಮಾಡುವುದು, ಮೆದುಳಿಗೆ ಪೆಟ್ಟಾಗದಂತೆ ಕಾಳಜಿ ವಹಿಸುವುದು, ಮದ್ಯಪಾನ, ಧೂಮಪಾನದಂತಹ ದುಶ್ಚಟಗಳಿಂದ ದೂರವಿರುವದು ಸೇರಿದಂತೆ ಮುಂತಾದ ಕ್ರಮಗಳನ್ನು ಕೈಗೊಳ್ಳುವ ಮೂಲಕ ಮಿದುಳಿನ ಆರೋಗ್ಯವನ್ನು ಕಾಪಾಡಿ ಕೊಳ್ಳಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಪ್ರಮುಖರಾದ ಜಗನಾಥ ಭಾಸಗಿ, ಶಕ್ತಿರಾಜ ರಡ್ಡಿ, ವಿಶ್ವನಾಥ ಪವಾಡಶೆಟ್ಟಿ, ಆಕಾಶ್ ಬಂಗರಗಿ, ಸುರಶ್ ಪಿ., ಭೀಮರಾವ ಜಮಖಂಡಿ, ಮಲ್ಲಿಕಾರ್ಜುನ ಕಲಬುರ್ಗಿ ಇದ್ದರು.

# ಕೊಲೆ: 24 ಗಂಟೆಯೊಳಗೆ ಆರೋಪಿಗಳ ಸೆರೆ

**ಕಲಬುರಗಿ,ಜೂ.9–**ಇಲ್ಲಿಗೆ ಸಮೀಪದ ಫಿರೋಜಾಬಾದ ದರ್ಗಾ ಹತ್ತಿರ ಮೇ.5 ರಂದು ನಡೆದ ಕಲಬುರಗಿ ನಗರದ ನಜಮೋದ್ದಿನ್ ತಂದೆ ಅಬ್ದುಲ್ ಸತ್ತಾರ ಸೊಲಾಪೂರಿ (45) ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಫರಹತಾಬಾದ ಠಾಣೆ ಪೊಲೀಸರು 24 ಗಂಟೆಯೊಳಗೆ 6 ಜನ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ನಜಮೋದ್ದಿನ್ ಮತ್ತು ಇತರರು ಕಾರಿನಲ್ಲಿ ಬಿ.ಗುಡಿ ಹತ್ತಿರವಿರುವ ಸಗರ ಶರೀಫ್ ದರ್ಗಾಕ್ಕೆ ಹೋಗುತ್ತಿದ್ದಾಗ ಫಿರೋಜಾಬಾದ ದರ್ಗಾ ಹತ್ತಿರ ದುಷ್ಕರ್ಮಿಗಳು ಕಾರನ್ನು ಅಡ್ಡಗಟ್ಟಿ ನಜಮೋದ್ದಿನ್‌ನನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿದ್ದರು.

ಈ ಹಿಂದೆ ಕೊಲೆಯಾದ ರೌಡಿಶೀಟರ್ ಖಲೀಲ್ ಸಹಚರರಾದ ಗಜಾನನ ಮತ್ತು ಇತರರು ಸೇರಿ ಈ ಕೊಲೆ ಮಾಡಿದ್ದಾರೆ ಎಂದು ನಜಮೋದ್ದಿನ್ ಸಹೋದರ ನಿಜಾಮುದ್ದೀನ್ ಅವರು ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

# ಬೆಲ್ಲದ ಕೊಳೆ, ಕಳ್ಳಭಟ್ಟಿ ವಶ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.9–** ತಾಲ್ಲೂಕಿನ ಹಲವು ಕಡೆಗಳಲ್ಲಿ ದಾಳಿ ನಡೆಸಿದ ಅಬಕಾರಿ ಪೊಲೀಸರು ಬೆಲ್ಲದ ಕೊಳೆ, ಕಳ್ಳಭಟ್ಟಿ ಸಾರಾಯಿ ವಶಪಡಿಸಿಕೊಂಡಿದ್ದಾರೆ.

ಅಬಕಾರಿ ಜಂಟಿ ಆಯುಕ್ತರು ಬೆಳಗಾವಿ ಇವರ ಆದೇಶ, ಕಲಬುರ್ಗಿಯ ಅಬಕಾರಿ ಜಂಟಿ ಆಯುಕ್ತರು, ರಾಯಚೂರು ಅಬಕಾರಿ ಉಪ ಅಧಿಕ್ಷಕರ ಮಾರ್ಗದರ್ಶನದಲ್ಲಿ ದಾಳಿ ನಡೆಸಿದ ಅಧಿಕಾರಿಗಳು, ಆರೋಪಿ ಹನುಮಂತನನ್ನು ವಿಚಾರಿಸಿ, ಗ್ರಾಮ ಸಭೆ ನಡೆಸಿದ್ದಾರೆ.

ತಾಲ್ಲೂಕಿನ ಜಕ್ಕೇರಮಡು ತಾಂಡಾ, ತಿಮ್ಮಾಪುರ ತಾಂಡಾ, ಹಡಗಲಿ ತಾಂಡಿಗಳಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಅಬಕಾರಿ ಪೊಲೀಸರು 50 ಲೀಟರ್ ಬೆಲ್ಲದ ಕೊಳೆ, ಒಂದು ಲೀಟರ್ ಅನ್ ಕ್ಲೈಮಡ್ ಕಳ್ಳಭಟ್ಟಿ ಸಾರಾಯಿ ವಶಪಡಿಸಿಕೊಂಡು ಸ್ಥಳದಲ್ಲಿಯೇ ನಾಶ ಪಡಿಸಲಾಗಿದೆ.

# ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರ,ಜೂ.9–**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಅರ್ಜಿ ಆಹ್ವಾನಿಸಲಾಗಿದೆ.

ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಮತ್ತು  ಹೊಲಿಗೆ ಯಂತ್ರ ವಿತರಣೆ ಯೋಜನೆಗಳು ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ, ಮತ್ತು ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿ ನಲ್ಲಿ ಉಳಿದ ಸಮುದಾಯಗಳಿಗೆ ಅನ್ವಯವಾಗುತ್ತವೆ. ಈ ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ನಿಗಮದ ವೆಬ್ಸೈಟ್ ತಿತಿತಿ.ಜಛಿಜಛಿ.ಇಚಿಡಿಟಿಚಿಣಚಿಞಚಿ.ರಠತಿ.ಟಿ ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿರುತ್ತದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080–22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08532–250440 ಸಂಪರ್ಕಿಸಬಹುದು. ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ದಿನಾಂಕ 30.06.2025ರಂದು ಕೊನೆಯ ದಿನಾಂಕ ನಿಗದಿಪಡಿಸಿದೆ ಎಂದು ಡಿ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A  Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka  Editor: **ANILKUMAR H**